ಸಂಪುಟ : 10 ಸಂಚಿಕೆ: 281 ಪುಟ : 4+2 ಬೆಲೆ: 3.00 ಮಂಗಳವಾರ ಡಿಸೆಂಬರ್ 23 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 281 Pages : 4+2 Price : 3.00 Tuesday December 23 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ಸರ್ಕಾರಿ, ಖಾಸಗಿ ಶಾಲೆಗಳ ಮುಖ್ಯಸ್ಥರೊಂದಿಗೆ ನಡೆದ ಮಕ್ಕಳ ಸುರಕ್ಷತೆ ಕುರಿತ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

# ವಾಹನಗಳಲ್ಲಿ ಮಕ್ಕಳ ಸುರಕ್ಷತೆಗೆ ಪ್ರಥಮಾದ್ಯತೆಯಿರಲಿ



> ಅಟೋಗಳ ಮೂಲಕ ಮಕ್ಕಳನ್ನು ಶಾಲೆಗಳಿಗೆ ಕರೆದೊಯ್ಯುವ ಸಂದರ್ಭದಲ್ಲಿ ಅಟೋ ಚಾಲಕರು ನಿಗದಿತ ಸಂಖ್ಯೆಗಿಂತ ಅಧಿಕ ಮಕ್ಕಳನ್ನು ಕರೆದುಕೊಂಡು ಹೋಗಬಾರದು. ಸುರಕ್ಷತೆಗೆ ಕ್ರಮ ವಹಿಸಿ ನಿಧಾನವಾಗಿ ಮಕ್ಕಳನ್ನು ಶಾಲೆಗಳಿಗೆ ತಲುಪಿಸುವ ಹಾಗೂ ಮನೆಗೆ ಕರೆದೊಯ್ಯುವ ಜವಾಬ್ದಾರಿ ವಾಹನ ಚಾಲಕರದ್ದಾಗಿರುತ್ತದೆ ಎಂದು ಎಸ್‌ಪಿ ರೋಹನ್ ಜಗದೀಶ್ ತಿಳಿಸಿದರು.



**■ ವಿಜಯಸಾಕ್ಷಿ ಸುದ್ದಿ, ಗದಗ**

ಶಾಲಾ ಮಕ್ಕಳ ಸಾರಿಗೆ ಸುರಕ್ಷತೆಯೇ ಶಿಕ್ಷಣ ಸಂಸ್ಥೆಗಳ ಪ್ರಥಮಾದ್ಯತೆಯಾಗಿರಲಿ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಸ್ಪಷ್ಟಪಡಿಸಿದರು.

ಗದಗ ಜಿಲ್ಲಾಡಳಿತ ಭವನದಲ್ಲಿ ಸೋಮವಾರ ಜಿಲ್ಲೆಯ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ಮುಖ್ಯಸ್ಥರೊಂದಿಗೆ ನಡೆದ ಮಕ್ಕಳ ಸುರಕ್ಷತೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ಶಾಲಾ ವಾಹನಗಳು ಸರ್ಕಾರದ ನಿಯಮಾವಳಿಗಳಂತೆ ಸಂಪೂರ್ಣವಾಗಿ ಸುರಕ್ಷಿತವಾಗಿರಬೇಕು. ಪ್ರತಿಯೊಂದು ಶಾಲಾ ಬಸ್‌ಗಳಲ್ಲಿ ಅಗತ್ಯ ದಾಖಲೆಗಳು, ವಾಹನದ ತಾಂತ್ರಿಕ ಸ್ಥಿತಿ, ನಿಯಮಿತ ಫಿಟ್ನೆಸ್ ಪ್ರಮಾಣಪತ್ರ, ವೇಗ ನಿಯಂತ್ರಕ ಸಾಧನ, ಅಗ್ನಿಶಾಮಕ ಉಪಕರಣಗಳು, ಪ್ರಥಮ ಚಿಕಿತ್ಸಾ ಪೆಟ್ಟಿಗೆ ಮತ್ತು ತುರ್ತು ನಿರ್ಗಮನ ವ್ಯವಸ್ಥೆ ಕಡ್ಡಾಯವಾಗಿರಬೇಕು ಎಂದು ಆದೇಶಿಸಿದರು.

ಶಾಲಾ ವಾಹನ ಚಾಲಕರಿಗೆ ಸೂಕ್ತ ಚಾಲನಾ ಪರವಾನಗಿ, ಅನುಭವ ಹಾಗೂ ಮಕ್ಕಳೊಂದಿಗೆ ಸ್ನೇಹಪರ ವರ್ತನೆ ಅಗತ್ಯವಿದೆ. ಶಾಲಾ ಬಸ್‌ಗಳಲ್ಲಿ ನಿರೀಕ್ಷಕರ (ಅಟೆಂಡರ್) ನೇಮಕ ಕಡ್ಡಾಯವಾಗಿದ್ದು, ಮಕ್ಕಳು ವಾಹನವನ್ನು ಏರುವ-ಇಳಿಯುವ ಸಂದರ್ಭದಲ್ಲಿ ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ಸೂಚನೆ ನೀಡಿದರಲ್ಲದೆ, ಯಾವುದೇ ರೀತಿಯ ಅತಿವೇಗ, ಮದ್ಯಪಾನ ಮಾಡಿ ಚಾಲನೆ ಅಥವಾ ನಿರ್ಲಕ್ಷ್ಯಕ್ಕೆ ಆಸ್ಪದವಿಲ್ಲ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸ್ಪಷ್ಟಪಡಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ, ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಶಾಲಾ ವಾಹನಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಕೆ, ಜಿಪಿಎಸ್ ವ್ಯವಸ್ಥೆ ಹಾಗೂ ಪೋಷಕರಿಗೆ ಮಾಹಿತಿ ನೀಡುವ ತಂತ್ರಜ್ಞಾನ ಬಳಕೆಗೆ ಒತ್ತು ನೀಡಬೇಕು. ಶಾಲಾ ಸಾರಿಗೆ ವ್ಯವಸ್ಥೆಯಲ್ಲಿ ಯಾವುದೇ ಲೋಪ ಕಂಡುಬಂದಲ್ಲಿ ಸಂಬಂಧಪಟ್ಟ ಶಾಲಾ ಆಡಳಿತದ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಕನಕದಾಸ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾದ ರವಿ ದಂಡಿನ ಮಾತನಾಡಿ, ಶಿಕ್ಷಣ ಸಂಸ್ಥೆಗಳಲ್ಲಿನ ಶಾಲಾ ವಾಹನಗಳ ಸಂಪೂರ್ಣ ಸುರಕ್ಷತೆಗೆ ಪ್ರಥಮಾದ್ಯತೆ ನೀಡಬೇಕಿದೆ. ಪ್ರತಿ ಮಗುವಿನ ಜೀವವೂ ಅತ್ಯಮೂಲ್ಯ. ನಿರ್ಲಕ್ಷ್ಯದ ವಾಹನ ಚಾಲನೆ ಹಾಗೂ ವರ್ತನೆ ಸಹಿಸಲಾಗದು. ಎಲ್ಲ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ನಮ್ಮ ಸಂಸ್ಥೆಯಲ್ಲಿನ ಮಕ್ಕಳ ಆರೋಗ್ಯ ಹಾಗೂ ಸೂಕ್ತ ಸಾರಿಗೆ ಸುರಕ್ಷತೆಗೆ ಆದ್ಯತೆ ವಹಿಸುವ ಮೂಲಕ ನಾಡಿನ ಮುಂದಿನ ಪ್ರಜೆಗಳ ಭವಿಷ್ಯ ಉಜ್ವಲಗೊಳಿಸಲು ಶ್ರಮಿಸೋಣ ಎಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿ ವಿಶಾಲ ಅವರುಗಳು ಮಕ್ಕಳ ಸುರಕ್ಷಿತ ಸಾರಿಗೆ ಕುರಿತು ಶಾಲಾ ಸಂಸ್ಥೆಯ ಮುಖ್ಯಸ್ಥರು ವಹಿಸಬೇಕಾದ ಕ್ರಮಗಳ ಕುರಿತು ಸವಿಸ್ತಾರವಾಗಿ ತಿಳಿಸಿಕೊಟ್ಟರು.

ಸಭೆಯಲ್ಲಿ ಪ್ರೊ. ಕೆ.ಎಚ್. ಬೇಲೂರ ಸೇರಿದಂತೆ ಶಿಕ್ಷಣ ಇಲಾಖೆ, ಸಾರಿಗೆ, ಪೊಲೀಸ್ ಇಲಾಖೆ, ಶಾಲಾ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರುಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

# ಶ್ರವಣ ಯಂತ್ರ ವಿತರಣೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ವಿಧಾನಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ 2025-26ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಜಗದೀಶ ಭಟ್ ಜೋಶಿ ಇವರಿಗೆ ಶ್ರವಣ ಸಾಧನ ಯಂತ್ರವನ್ನು ವಿತರಿಸಿದರು.

ನಂತರ ಮಾತನಾಡಿದ ಎಸ್.ವಿ. ಸಂಕನೂರ, ವಿಕಲಚೇತನರ ಕಲ್ಯಾಣಕ್ಕಾಗಿ ಸರ್ಕಾರ ಹಲವಾರು ಸೌಲಭ್ಯ ಹಾಗೂ ಯೋಜನೆಗಳನ್ನು ನೀಡುತ್ತಿದೆ. ಅವುಗಳನ್ನು ಅರ್ಹರು ಇಲಾಖೆಗೆ ಅರ್ಜಿ ಸಲ್ಲಿಸುವ ಮೂಲಕ ಪಡೆದುಕೊಳ್ಳಲು ಮುಂದಾಗಬೇಕು. ಇಲಾಖಾಧಿಕಾರಿಗಳು ಬಂದಿರುವ ಅರ್ಜಿಗಳನ್ನು ಪರಿಶೀಲನೆ ನಡೆಸಿ ಅರ್ಹರಿಗೆ ಯೋಜನೆಗಳ ಲಾಭ ತಲುಪಿಸುವ ಪ್ರಾಮಾಣಿಕ ಪ್ರಯತ್ನ ಮಾಡುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿ ಮಹಾಂತೇಶ್‌ಕೆ ಮುಂತಾದವರು ಹಾಜರಿದ್ದರು.

## ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ

# ಪೋಲಿಯೋ ವಿರುದ್ಧದ ಗೆಲುವನ್ನು ಮುಂದುವರೆಸೋಣ

**■ ವಿಜಯಸಾಕ್ಷಿ ಸುದ್ದಿ, ಗದಗ**

ಭಾರತವು ಪೋಲಿಯೋ ಮುಕ್ತ ದೇಶವಾಗಿದೆ. ಆದರೆ, ನೇರೆಯ ದೇಶಗಳಲ್ಲಿ ಪೋಲಿಯೋ ಇನ್ನೂ ಜೀವಂತ ಇರುವದರಿಂದ ನಮ್ಮ ದೇಶದಲ್ಲಿಯೂ ಮತ್ತೆ ಮರುಕಳಿಸುವ ಸಾಧ್ಯತೆಯಿದೆ. ನಮ್ಮ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕಿಸಿ ಮಕ್ಕಳನ್ನು ರಕ್ಷಿಸಬೇಕಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.



> ಬೆಂಗಳೂರಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಉಪನಿರ್ದೇಶಕಿ ಹಾಗೂ ರಾಜ್ಯ ಪಲ್ಸ್ ಪೋಲಿಯೋ ನೋಡಲ್ ಅಧಿಕಾರಿ ಡಾ. ನಂದಿನಿ ಬಿ ಮಾತನಾಡಿ, ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ದೇಶಾದ್ಯಂತ ಮತ್ತು ರಾಜ್ಯಾದಂತ ಅಭಿಯಾನದ ರೂಪದಲ್ಲಿ ಹಮ್ಮಿಕೊಂಡಿದ್ದು, 5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಹನಿಗಳನ್ನು ಹಾಕಲಾಗುತ್ತಿದೆ.
>
> ಶಾಶ್ವತ ಅಂಗವಿಕಲತೆ ತರಬಲ್ಲ ಪೋಲಿಯೋವನ್ನು ಲಸಿಕೆಯ ಮೂಲಕ ಪ್ರತಿರೋಧಿಸೋಣ ಎಂದು ತಿಳಿಸಿದರು.

ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ರೋಟರಿ ಕ್ಲಬ್‌ಗಳ ಸಂಯುಕ್ತ ಆಶ್ರಯದಲ್ಲಿ ದುಂಡಪ್ಪ ಹೆರಿಗೆ ಆಸ್ಪತ್ರೆಯಲ್ಲಿ ಜರುಗಿದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಕ್ಕಳಿಗೆ ಎರಡು ಪೋಲಿಯೋ ಹನಿ ಹಾಕಿ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಪೋಲಿಯೋ ವಿರುದ್ಧ ಭಾರತವು ಸಾಧಿಸಿರುವ ಗೆಲುವನ್ನು ನಾವೆಲ್ಲರೂ ಮುಂದುವರಿಸಲು ಕೈಜೋಡಿಸಬೇಕೆಂದು ಕರೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಡಿಯಲ್ಲಿ ನಮ್ಮ ಜಿಲ್ಲೆಯ ಎಲ್ಲಾ ತಾಯಂದಿರು ಐದು ವರ್ಷದೊಳಗಿನ ಮಕ್ಕಳನ್ನು ಕರೆದುಕೊಂಡು ಬಂದು ತಪ್ಪದೇ ಪೋಲೀಯೋ ಹನಿ ಹಾಕಿಸಿಕೊಳ್ಳಬೇಕೆಂದು ವಿನಂತಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮೀನಾಕ್ಷಿ ಕೆ.ಎಸ್, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಬಿ.ಸಿ. ಕರಿಗೌಡ್ರ, ರೋಟರಿ ಕ್ಲಬ್ ಅಧ್ಯಕ್ಷ ಡಾ. ರಾಜೇಂದ್ರ, ಜಿಲ್ಲಾ ಐ.ಎಮ್.ಎ ಅಧ್ಯಕ್ಷ ಡಾ. ಶ್ರೀಧರ ಕುರಡಗಿ, ಡಾ. ಅರುಂಧತಿ, ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ, ಡಾ. ಶೇಖರ ಸಜ್ಜನ, ರೂಪಸೇನ ಚವ್ಹಾಣ, ಸುರೇಶ ಕುಂಬಾರ, ರಾಜೇಂದ್ರ ಗಡಾದ, ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಗುತ್ತಿಗೆ ಪೌರಕಾರ್ಮಿಕರ ಪ್ರತಿಭಟನೆ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪುರಸಭೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಪೌರಕಾರ್ಮಿಕರನ್ನು ಕೆಲಸದಿಂದ ತೆಗೆದಿದ್ದು, ಪುನಃ ನೇಮಿಸಿಕೊಳ್ಳಬೇಕು ಎಂದು ಗುತ್ತಿಗೆ ಕಾರ್ಮಿಕರು ಪುರಸಭೆ ಎದುರು ಸೋಮವಾರ ಪ್ರತಿಭಟನೆ ನಡೆಸಿದರು.

ಈ ವೇಳೆ ಗುತ್ತಿಗೆದಾರ ಪೌರಕಾರ್ಮಿಕರ ಪಾಲಕರಾದ ಕಮಲವ್ವ ನಂದೆಣ್ಣವರ ಹಾಗೂ ಯಲ್ಲಕ್ಕ ಗಡದವರ ಮಾತನಾಡಿ, ಕಳೆದ 10 ವರ್ಷಗಳಿಂದ ಹೋರಾಟ ಮಾಡುತ್ತಿದ್ದರೂ ನಮಗೆ ನ್ಯಾಯ ಸಿಗುತ್ತಿಲ್ಲ. ನ್ಯಾಯ ಸಿಗುವವರೆಗೂ ಇಲ್ಲಿಂದ ಕದಲುವುದಿಲ್ಲ. ಮಾರ್ಚ್‌ನಿಂದ ಕಾರ್ಯ ನಿರ್ವಸುತ್ತಿದ್ದು, ಗುತ್ತಿಗೆದಾರ 2 ತಿಂಗಳ ಗೌರವಧನ ಕೊಟ್ಟು ಇನ್ನು ಎರಡು ತಿಂಗಳು ಗೌರವಧನ ಕೊಟ್ಟಿಲ್ಲ. 10 ಜನರಲ್ಲಿ 6 ಜನರನ್ನು ಪುನಃ ತೆಗೆದು-ಕೊಂಡಿದ್ದಾರೆ. ನಾಲ್ಕು ಜನರನ್ನು ಕೆಲಸದಿಂದ ತೆಗೆದುಹಾಕಿದ್ದು, ಹೋರಾಟ ಮಾಡಿದವರನ್ನು ಬಿಟ್ಟು ಬೇರೆಯವರನ್ನು ಕೆಲಸಕ್ಕೆ ತೆಗೆದುಕೊಂಡಿದ್ದಾರೆ ಎಂದು ಆರೋಪಿಸಿದರಲ್ಲದೆ, ನಾಲ್ಕು ಜನರನ್ನು ಪುನಃ ಕೆಲಸಕ್ಕೆ ತೆ-ಗೆದುಕೊಂಡರೆ ಮಾತ್ರ ಉಳಿದವರು ಕೆಲಸಕ್ಕೆ ಹಾಜರಾಗುತ್ತೇವೆ ಎಂದು ಪಟ್ಟು ಹಿಡಿದು ಪ್ರತಿಭಟನೆ ನಡೆಸಿದರು.

ವಿಷಯ ತಿಳಿದು ಪೊಲೀಸರು ಸ್ಥಳಕ್ಕೆ ಆಗಮಿಸಿ ಪ್ರತಿಭ'ಟನಾಕಾರರೊಂದಿಗೆ ಮಾತನಾಡಿ, ಅವರಿಗೆ ತಿಳಿಹೇಳಿ ಪರಿಸ್ಥಿತಿ ಶಾಂತಗೊಳಿಸಿದರು. ಈ ಸಂದರ್ಭದಲ್ಲಿ ನೀಲಪ್ಪ ಶಿರಹಟ್ಟಿ, ಕಲ್ಯಾಣಕುಮಾರ ಹಾದಿಮನಿ, ದುರ್ಗವ್ವ ಶಿರಹಟ್ಟಿ, ಮಲ್ಲವ್ವ ನಂದೆಣ್ಣವರ, ಹನುಮವ್ವ ಗಡದವರ, ದ್ಯಾಮಕ್ಕ ನಂದೆಣ್ಣವರ, ಕರಿಯವ್ವ ದೊಡ್ಡಮನಿ, ಪ್ರೇಮವ್ವ ಹಾದಿಮನ ಮತ್ತಿತರರು ಇದ್ದರು.

## ಪತ್ರಿಕಾಗೋಷ್ಠಿಯಲ್ಲಿ ಹಿಂದುಳಿದ ದಲಿತ ಸಂಘದ ಕಾರ್ಯಕರ್ತ ಜಬೀವುಲ್ಲಾ ಎ.ಆರ್ ಒತ್ತಾಯ

# ಎಥೆನಾಲ್ ಕಂಪನಿಗೆ ಅವಕಾಶ ನೀಡಬಾರದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಹಿರೇಮಲ್ಲಾಪೂರ ಗ್ರಾಮದ ಸರ್ವೇ ನಂ 45, 46ರಲ್ಲಿ ಅಲೈನ್ ಎಥೆನಾಲ್ ಪ್ರೈವೇಟ್ ಲಿಮಿಟೆಡ್ ರೆಡ್ ಕಂಪನಿ ಸ್ಥಾಪನೆ ಆಗುತ್ತಿದ್ದು, ಇದರಿಂದ ಪರಿಸರ ಮಾಲಿನ್ಯ, ವಾಯುಮಾಲಿನ್ಯ, ಶಬ್ದ ಮಾಲಿನ್ಯ, ಜಲಮಾಲಿನ್ಯ ಆಗುವ ಸಾಧ್ಯತೆಯಿದೆ. ಈ ಕಂಪನಿ ಸ್ಥಾಪಿಸಲು ಅವಕಾಶ ನೀಡಬಾರದು ಎಂದು ದಲಿತ ಸಂಘಟನಾ ಸಮಿತಿಯ ಅಲ್ಪಸಂಖ್ಯಾತ ಹಿಂದುಳಿದ ದಲಿತ ಸಂಘದ ಕಾರ್ಯಕರ್ತ ಜಬೀವುಲ್ಲಾ ಎ.ಆರ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಎಥೆನಾಲ್ ರೆಡ್ ಕಂಪನಿ ವಿರುದ್ಧ ಹಿರೇಮಲ್ಲಾಪೂರ ಗ್ರಾಮಸ್ಥರು ಅನಿರ್ಧಿಷ್ಟಾವಧಿ ಧರಣಿಯನ್ನು ಆರಂಭಿಸಿದ್ದರು. ಪೊಲೀಸ್ ಇಲಾಖೆ ಬಲವಂತವಾಗಿ ಈ ಹೋರಾಟ ಹತ್ತಿಕ್ಕಿತ್ತು. ಅಲ್ಲದೇ, ಮಹಾತ್ಮ ಗಾಂಧಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಭಾವಚಿತ್ರವನ್ನು ಪೊಲೀಸ್ ವಾಹನದಲ್ಲಿ ಕೊಂಡೊಯ್ಯಲಾಗಿದೆ.




ಈ ಕುರಿತು ತಹಸೀಲ್ದಾರರು ಹಾಗೂ ಜಿಲ್ಲಾಧಿಕಾರಿಗಳಿಗೆ ಹಲವಾರು ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನ ಆಗಿಲ್ಲ.

ಇದರ ವಿರುದ್ಧ ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿ ಕಛೇರಿ ಮುಂಬಾಗದಲ್ಲಿ ಅನಿರ್ದಿಷ್ಠಾವಧಿ ಧರಣಿ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಕಂಪನಿಯು ಕೆಂಪು ವರ್ಗದ ಕೈಗಾರಿಕೆಯಾಗಿದೆ. ಇದು ಜನವಸತಿ ಪ್ರದೇಶದಿಂದ ಕೇವಲ 50ರಿಂದ 100 ಮೀಟರ್ ಅಂತರದಲ್ಲಿ ಇರುವುದರಿಂದ ಸರ್ಕಾರದ ಆದೇಶದಂತೆ ಕೆಂಪು ವರ್ಗದ ಕೈಗಾರಿಕೆಗಳು ಜನ ವಸತಿ ಪ್ರದೇಶದಿಂದ ಕನಿಷ್ಠ 800 ಮೀಟ-ರ್‌ಗಿಂತ ದೂರವಿರಬೇಕು ಎಂಬ ಆದೇಶವನ್ನು ಗಾಳಿಗೆ ತೂರಲಾಗಿದೆ ಎಂದು ಆರೋಪಿಸಿದರು.

ಈ ವೇಳೆ ದಲಿತ ಸಂಘಟನಾ ಸಮಿತಿ ಅಲ್ಪಸಂಖ್ಯಾತ ಹಿಂದುಳಿದ ದಲಿತ ಸಂಘದ ಗದಗ ಜಿಲ್ಲಾಧ್ಯಕ್ಷ ಅನಿಲಕುಮಾರ ಪೂಜಾರ, ಸಂಜೀವಕುಮಾರ ಪೋತರಾಜ, ಹಾಲಪ್ಪ ಬಂಡಾರಿ, ನಾಗರಾಜ ಉಪ್ಪಾರ, ರಜಾಕ ಅಹ್ಮದ್ ಮುಲ್ಲಾನವರ ಉಪಸ್ಥಿತರಿದ್ದರು.

> ಸ್ಥಾಪನೆ ಆಗುತ್ತಿರುವ ಕಂಪನಿಯ ಪಕ್ಕದಲ್ಲಿ ಕಪ್ಪತಗುಡ್ಡ ವನ್ಯಜೀವಿ ಅಭಯಾರಣ್ಯವಿದೆ. ಕೇಂದ್ರ ಸರ್ಕಾರವು ಕಪ್ಪತಗುಡ್ಡವನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಣೆ ಮಾಡಿದ್ದು, ಪಕ್ಕದಲ್ಲಿರುವ ಹಿರೇಮಲ್ಲಾಪುರದ ಸರ್ವೆ ನಂಬರ್ 59, 60, 61, 76 ಹಾಗೂ ಇತರೆ ಪ್ರದೇಶವು ವನ್ಯಜೀವಿ ಅಭಯಾರಣ್ಯ ಹಾಗೂ ಪರಿಸರ ಸೂಕ್ಷ್ಮ ಪ್ರದೇಶ ಆಗಿದೆ.
>
> ಕೇಂದ್ರ ಪರಿಸರ ಮತ್ತು ಅರಣ್ಯ ಸಚಿವಾಲಯ ಈ ಪ್ರದೇಶಗಳಿಂದ 10 ಕಿ.ಮೀವರೆಗೆ ಯಾವುದೇ ಕೆಂಪು ವರ್ಗಕ್ಕೆ ಸೇರಿದ ಕೈಗಾರಿಕೆಗಳು ಸ್ಥಾಪನೆ ಮಾಡಲು ಅವಕಾಶ ಇರುವುದಿಲ್ಲ ಎಂದು ಆದೇಶಿಸರುವದನ್ನು ಗಮನಿಸಬೇಕು ಎಂದು ಜಬೀವುಲ್ಲಾ ಎ.ಆರ್ ಹೇಳಿದರು.



ಗದುಗಿನ ತಿಮ್ಮಾಪೂರ ಗ್ರಾಮದಲ್ಲಿ ರಾಷ್ಟ್ರೀಯ ಪೋಲಿಯೋ ಕಾರ್ಯಕ್ರಮದ ಅಂಗವಾಗಿ ಲಸಿಕಾ ಕಾರ್ಯಕ್ರಮಕ್ಕೆ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಚಾಲನೆ ನೀಡಿದರು. 1ರಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಎರಡು ಹನಿ ಪೋಲಿಯೋ ಲಸಿಕೆಯನ್ನು ಕಡ್ಡಾಯವಾಗಿ ಹಾಕಿಸಿ ಮುಂದೆ ಬರಬಹುದಾದ ಅಂಗವಿಕಲತೆಯನ್ನು ತಡೆಯೋಣ ಎಂದು ಹೇಳಿದರು. ಸಹಾಯಕ ವೈದ್ಯರಾದ ಗಂಗಮ್ಮ ಕುಂಬಾರ ಹಾಗೂ ಅಕ್ಷತಾ ಇಳಿಗೆರೆ ಮಾತನಾಡಿದರು. ಅಂಗನವಾಡಿ ಕಾರ್ಯಕರ್ತೆಯರಾದ ಲಕ್ಷ್ಮೀ ಇದ್ಲಿ, ಶಂಕ್ರಮ್ಮ ಇದ್ಲಿ, ವಿದ್ಯಾ ಇದ್ಲಿ, ದೇವಕ್ಕ ಆಲೂರು, ಶೃತಿ ತುಪ್ಪದ, ಸತ್ಯಮ್ಮ ಮಣ್ಣೂರ, ವಿಜಯಲಕ್ಷ್ಮೀ ಉಂಡಿ, ಶಾರದಾ ಗೋಂದಿ ಮುಂತಾದವರಿದ್ದರು.




**ಗದಗ:** ಜಗದ್ಗುರು ತೋಂಟದಾರ್ಯ ಸಂಸ್ಕೃತ ಪಾಠಶಾಲೆಯಲ್ಲಿ ಇತ್ತೀಚೆಗೆ ಗೀತಾ ಜಯಂತಿ ಆಚರಿಸಲಾಯಿತು. ವಿದ್ಯಾರ್ಥಿಗಳು, ಮುಖ್ಯೋಪಾಧ್ಯಾಯರಾದ ಎಸ್ ಎನ್ ಶಿಂಪಗೇರ, ಸಂಸ್ಕೃತ ಭಾರತಿನಗರ ಸಂಯೋಜಕರಾದ ಮೌನೇಶ ಭಜಂತ್ರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು. ಶಿಂಪಿಗೇರ ಗುರುಗಳು ತಮ್ಮ ವಿದ್ಯಾರ್ಥಿಗಳಿಗೆ ಗೀತಾ ಪಾಠದ ಮಹತ್ವ ಬಗ್ಗೆ ತಿಳಿಸಿಕೊಟ್ಟರು.

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಶಾಸಕ ಎನ್.ಎಚ್. ಕೋನರಡ್ಡಿ

# ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಹಕರಿಸಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪೋಲಿಯೋ ಮುಕ್ತ ಸಮಾಜ ರೂಪಿಸಲು ಎಲ್ಲ ಪಾಲಕರು ತಮ್ಮ ಮಕ್ಕಳಿಗೆ ತಪ್ಪದೇ ಪೋಲೀಯೊ ಲಸಿಕೆ ಹಾಕಿಸಬೇಕು. ಈ ಮೂಲಕ ರಾಷ್ಟ್ರೀಯ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ, ಪೋಲಿಯೋ ಮುಕ್ತ ಸಮಾಜ ರೂಪಿಸಲು ಶ್ರಮಿಸಬೇಕೆಂದು ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ ಹೇಳಿದರು.

ಅವರು ಭಾನುವಾರ ಬೆಳಿಗ್ಗೆ ಧಾರವಾಡ ನಗರದ ಮಹಾನಗರಪಾಲಿಕೆ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಾನಗರಪಾಲಿಕೆ ಸಂಯುಕ್ತವಾಗಿ ಆಯೋಜಿಸಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ದೇಶವನ್ನು ಪೋಲಿಯೋ ಮುಕ್ತವಾಗಿಸುವ ನಿಟ್ಟಿನಲ್ಲಿ ಹಮ್ಮಿಕೊಳ್ಳಲಾಗಿರುವ ಪಲ್ಸ್ ಪೋಲಿಯೋ ಅಭಿಯಾನದ ಸದುಪಯೋಗವನ್ನು ಪ್ರತಿಯೊಬ್ಬ ಪೋಷಕರು ಪಡೆದುಕೊಳ್ಳಬೇಕು. ಐದು ವರ್ಷದೊಳಗಿನ ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ತಿಳಿಸಿದರು.



ಜಿಲ್ಲೆಯಾದ್ಯಂತ ವ್ಯವಸ್ಥಿತವಾಗಿ ಅಭಿಯಾನವನ್ನು ಸಂಘಟಿಸಲಾಗಿದೆ. ಜಿಲ್ಲೆಯ ಮೂಲೆ ಮೂಲೆಗೂ ಲಸಿಕೆ ತಲುಪಿಸುವ ಉದ್ದೇಶದಿಂದ ಒಟ್ಟು 891 ಪಲ್ಸ್ ಪೋಲಿಯೋ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಈ ಕೇಂದ್ರಗಳಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿ ಲಭ್ಯವಿದ್ದು, ಮಕ್ಕಳಿಗೆ ಲಸಿಕೆ ಹಾಕಲಿದ್ದಾರೆ ಎಂದು ತಿಳಿಸಿದರು.

ಪೋಲಿಯೋ ಎಂಬುದು ಮಾರಕ ಕಾಯಿಲೆಯಾಗಿದ್ದು, ಮುಂಜಾಗ್ರತಾ ಕ್ರಮವಾಗಿ ಲಸಿಕೆ ಹಾಕುವುದು ಅತ್ಯಗತ್ಯ. ನಿಮ್ಮ ಮನೆಯಲ್ಲಿ ಅಥವಾ ನೆರೆಹೊರೆಯಲ್ಲಿ ಐದು ವರ್ಷದೊಳಗಿನ ಮಕ್ಕಳಿದ್ದರೆ ಅವರನ್ನು ಹತ್ತಿರದ ಲಸಿಕಾ ಕೇಂದ್ರಕ್ಕೆ ಕರೆತಂದು ಪೋಲಿಯೋ ಹನಿ ಹಾಕಿಸಿ. ಸರ್ಕಾರದ ಈ ಬೃಹತ್ ಅಭಿಯಾನದ ಸದುಪಯೋಗವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ಜ್ಯೋತಿ ಪಾಟೀಲ ಮಾತನಾಡಿ, ಈ ಬಾರಿಯ ಅಭಿಯಾನದಲ್ಲಿ ಕೇವಲ ಮೂರು ದಿನಗಳ ಅವಧಿಯಲ್ಲಿ ಒಟ್ಟು 2 ಲಕ್ಷದ 7 ಸಾವಿರ ಮಕ್ಕಳನ್ನು ತಲುಪಿ, ಪೋಲಿಯೋ ಲಸಿಕೆ ನೀಡುವ ಬೃಹತ್ ಗುರಿಯನ್ನು ಹೊಂದಲಾಗಿದೆ. ಈ ಗುರಿಯನ್ನು ತಲುಪಲು ಈಗಾಗಲೇ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಪ್ರತಿ ಮಗುವಿಗೂ ಲಸಿಕೆ ತಲುಪುವಂತೆ ಎಚ್ಚರಿಕೆ ವಹಿಸಲಾಗುತ್ತದೆ ಎಂದು ಅವರು ಹೇಳಿದರು.

ಹಿರಿಯ ಮಕ್ಕಳ ತಜ್ಞ ವೈದ್ಯ ಡಾ. ರಾಜನ್ ದೇಶಪಾಂಡೆ ಮಾತನಾಡಿ, ಪೋಲಿಯೋ ಹರಡಲು ಯಾವುದೇ ವೀಸಾ ಅಥವಾ ಅಧಿಕೃತ ಅನುಮತಿಯ ಅಗತ್ಯವಿಲ್ಲ. ಇದು ಪಕ್ಕದ ದೇಶಗಳಿಂದ ಅಥವಾ ರಾಜ್ಯಗಳಿಂದ ಅತ್ಯಂತ ವೇಗವಾಗಿ ಸಂಚರಿಸಬಲ್ಲದು ಎಂದು ಹೇಳಿದರು.


ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ವಿಶ್ವ ಆರೋಗ್ಯ ಸಂಸ್ಥೆಯು 2014ರಲ್ಲಿ ಭಾರತವನ್ನು ಅಧಿಕೃತವಾಗಿ ಪೋಲಿಯೋ ಮುಕ್ತ ದೇಶ ಎಂದು ಘೋಷಿಸಿತು. ಸತತ ಮೂರು ವರ್ಷಗಳ ಕಾಲ ದೇಶದಲ್ಲಿ ಯಾವುದೇ ಹೊಸ ಪೋಲಿಯೋ ಪ್ರಕರಣಗಳು ವರದಿಯಾಗದ ಕಾರಣ, ವಿಶ್ವ ಆರೋಗ್ಯ ಸಂಸ್ಥೆಯು ಭಾರತವನ್ನು ಅಧಿಕೃತವಾಗಿ ಪೋಲಿಯೋ ಮುಕ್ತ ದೇಶ ಎಂದು ಘೋಷಿಸಿತು. ಆದರೂ ಅಪಾಯದ ಭೀತಿ ಮಾತ್ರ ಇನ್ನೂ ಪೂರ್ಣವಾಗಿ ಕಡಿಮೆಯಾಗಿಲ್ಲ ಎಂದು ಹೇಳಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಂ. ಹೊನಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಆರೋಗ್ಯ ಇಲಾಖೆಯ ರೇಖಾ ಬಾಡಗಿ ಕಾರ್ಯಕ್ರಮ ನಿರೂಪಿಸಿದರು. ಆರ್.ಸಿ.ಎಚ್.ಓ ಅಧಿಕಾರಿ ಡಾ. ಸುಜಾತಾ ಹಸವೀಮಠ ವಂದಿಸಿದರು.

ವೇದಿಕೆಯಲ್ಲಿ ಮಹಾ ನಗರಪಾಲಿಕೆ ಸಭಾ ನಾಯಕ ಈರೇಶ ಅಂಚಟಗೇರಿ, ಪಾಲಿಕೆ ಸದಸ್ಯ ಸುರೇಶ ಬೇದ್ರೆ, ಆರೋಗ್ಯ ಇಲಾಖೆ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕಿ ಡಾ. ಎಚ್.ಆರ್. ಪುಷ್ಪಾ, ರಾಜ್ಯ ನೋಡಲ್ ಅಧಿಕಾರಿ ಡಾ.ಉಮಾ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಸಂಗಪ್ಪ ಗಾಬಿ, ಮಹಾನಗರ ಪಾಲಿಕೆ ಮುಖ್ಯ ವೈದ್ಯಾಧಿಕಾರಿ ಡಾ.ಶ್ರೀಧರ ದಂಡೆಪ್ಪನವರ, ಧಾರವಾಡ ತಾಲೂಕಾ ವೈದ್ಯಾಧಿಕಾರಿ ಡಾ. ಕೆ.ಎನ್. ತನುಜಾ, ಮಹಾನಗರಪಾಲಿಕೆ ಧಾರವಾಡ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಅಶ್ವಿನಿ, ಆರೋಗ್ಯ ಇಲಾಖೆಯ ಕಾರ್ಯಕ್ರಮ ಅಧಿಕಾರಿ ಡಾ. ಶಶಿಧರ ಕಳಸೂರಮಠ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ರೋಟರಿ ಕ್ಲಬ್ ಪದಾಧಿಕಾರಿಗಳು, ಆರೋಗ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಭಾಗವಹಿಸಿದ್ದರು.

ರೇಲ್ವೇ ಕೆಳ ಸೇತುವೆ ವಾಹನ ಸಂಚಾರಕ್ಕೆ ಮುಕ್ತಗೊಳಿಸಲು ಸಂಸದರಿಗೆ ಮನವಿ

# ಸಾರ್ವಜನಿಕರಿಗಾಗುವ ಅನಾನುಕೂಲ ಸರಿಪಡಿಸಿ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಅಬ್ದುಲ್ ಕಲಾಂ ಶಾದಿ ಮಹಲ್ ಹತ್ತಿರದ ರೇಲ್ವೇ ಕೆಳ ಸೇತುವೆಯ ರಸ್ತೆಯನ್ನು ತೆರವುಗೊಳಿಸಿ ವಾಹನ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕೆಂದು ಆಗ್ರಹಿಸಿ ಗದಗ-ಬೆಟಗೇರಿಯ ಸಾರ್ವಜನಿಕರು ಸಂಸದ ಬಸವರಾಜ ಬೊಮ್ಮಾಯಿ ಅವರಿಗೆ ಮನವಿ ಸಲ್ಲಿಸಿದರು. ರಸ್ತೆ ಸಂಚಾರದಿಂದ ತೊಂದರೆಗೆ ಒಳಗಾದ ಅವಳಿ ನಗರದ ಸಾರ್ವಜನಿಕರು ರವಿವಾರ ನಗರಕ್ಕೆ ಆಗಮಿಸಿದ್ದ ಬೊಮ್ಮಾಯಿ ಅವರನ್ನು ಭೇಟಿ ಮಾಡಿ ತಮಗಾದ ಸಮಸ್ಯೆಯನ್ನು ನಿವೇದಿಸಿಕೊಂಡರು.

ಗದಗ-ಬೆಟಗೇರಿ ಅವಳಿ ನಗರಕ್ಕೆ ಮೂರು ರೇಲ್ವೇ ಕೆಳಸೇತುವೆ ಇದ್ದು, ಮೂರೂ ಕೆಳಸೇತುವೆಗಳು ವಾಟರ್ ಬೇಸ್ ಸೇತುವೆಗಳಾಗಿವೆ. ಜನಸಂಖ್ಯೆ ಬೆಳೆಯುತ್ತಾ ಹೋದಂತೆ ಹಳೇ ಕೋರ್ಟ್ ಹಾಗೂ ಬಳ್ಳಾರಿ ಗೇಟ್ ಬಳಿಯ ಕೆಳಸೇತುವೆಗೆ ಡಾಂಬರ್ ರಸ್ತೆ ಮಾಡಿ ಸಂಚಾರಕ್ಕೆ ಅನುಕೂಲ ಒದಗಿಸಲಾಗಿದೆ.

ಅಬ್ದುಲ್ ಕಲಾಂ ಶಾದಿ ಮಹಲ್ ಹತ್ತಿರದ ಡಬಲ್ ಅಂಡರ್ ಪಾಸ್ ಸೇತುವೆ ಇದ್ದು, ಒಂದರಲ್ಲಿ ನೀರು ಇನ್ನೊಂದರಲ್ಲಿ ಸುಮಾರು 50 ವರ್ಷಗಳಿಂದ ಜನಸಂಚಾರ ಮಾಡುತ್ತ ಬಂದಿದ್ದಾರೆ. ಆದರೆ ಈಗ ಅದನ್ನು ತಿಂಗಳ ಹಿಂದೆ ರಾತ್ರೋರಾತ್ರಿ ಹಳಿ ಹಾಕಿ ವಾಹನ ಸಂಚಾರವನ್ನು ಬಂದ್ ಮಾಡಲಾಗಿದೆ.

ಈ ಕೆಳ ಸೇತುವೆಯಿಂದ 300 ಮೀಟರ್ ಅಂತರದಲ್ಲಿ 50 ಹಾಸಿಗೆಯುಳ್ಳ ಸರ್ಕಾರಿ ಆಸ್ಪತ್ರೆಯಿದ್ದು, ಈ ಆಸ್ಪತ್ರೆಗೆ, ಶಾಲಾ-ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳಿಗೆ, ಚಕ್ಕಡಿಗಳೊಂದಿಗೆ ರೈತರು ತಮ್ಮ ಜಮೀನುಗಳಿಗೆ ಹೋಗಲು, ಕೂಲಿಕಾರ್ಮಿಕರಿಗೆ ಸಂಚರಿಸಲು ಇದೇ ಮಾರ್ಗವನ್ನು ಬಹು ವರ್ಷಗಳಿಂದ ಅವಲಂಬಿಸಿದ್ದಾರೆ.

ಆಸ್ಪತ್ರೆಗೆ ಹೋಗುವ ಅಂಬ್ಯುಲೆನ್ಸ್, ಸ್ಕೂಲ್ ಬಸ್ ಹಾಗೂ ಲಘು ವಾಹನಗಳ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕೆಂದು ಸಾರ್ವಜನಿಕರು ಮನವಿ ಪತ್ರದಲ್ಲಿ ವಿನಂತಿಸಿಕೊಂಡರು.

ಮನವಿ ಸ್ವೀಕರಿಸಿ ಮಾತನಾಡಿದ ಸಂಸದ ಬಸವರಾಜ ಬೊಮ್ಮಾಯಿ, ಈ ಕುರಿತು ರೇಲ್ವೇ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆ ಇತ್ಯರ್ಥಗೊಳಿಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಬಸವನಗುಡಿ ಬಡಾವಣೆಯ ಅಭಿವೃದ್ಧಿ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಐಲಿ, ಕಾರ್ಯದರ್ಶಿ ಹರೀಶ್ ಪೂಜಾರ, ಎಸ್.ಎನ್. ಟಕ್ಕೇದ, ವ್ಹಿ.ಎ. ಸೋನಾರ, ಶ್ರೀಧರ ಹಾಳಕೇರಿ, ಶಿವು ಹಿರೇಮನಿಪಾಟೀಲ, ಸತೀಶ್ ಪೂಜಾರ, ಬಸವರಾಜ ಚನ್ನಪ್ಪಗೌಡರ, ಫಕ್ಕೀರಪ್ಪ ನಾಲ್ವಾಡ, ಶೇಖಪ್ಪ ಹಡಪದ, ಬಸವರಾಜ ಜಲ್ಲಿ, ಸಿದ್ಧರಾಮಯ್ಯ ಮಾಕಾಪೂರ, ಶಿವಾನಂದ ಪತ್ತಾರ, ಹನಮಪ್ಪ ಹದ್ಲಿ, ಮಹಾದೇವಪ್ಪ ಚಿಕ್ಕಣ್ಣವರ, ವ್ಹಿ.ವ್ಹಿ. ಮಠದ, ಗೂಳಪ್ಪ ರೊಟ್ಟಿ, ಪ್ರಭುಗೌಡ ಬೂದೇಶ, ತೋಂಟದಾರ್ಯ ಬೂಸ್ತ, ಬೆಟಗೇರಿ ರೈತ ಸಂಘದ ಅಧ್ಯಕ್ಷ ಅಜ್ಜನಗೌಡ ಹಿರೇಮನಿಪಾಟೀಲ, ರಾಘವೇಂದ್ರ ಯಳವತ್ತಿ, ಮಹೇಶ ಕೋಟಿ ಮುಂತಾದವರಿದ್ದರು.

# ಮಾನಸಿಕ, ದೈಹಿಕ ಸದೃಢತೆಗೆ ಕ್ರೀಡೆಗಳು ಪೂರಕ



**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಒತ್ತಡ ನಿವಾರಣೆ, ಮಾನಸಿಕ ನೆಮ್ಮದಿ ಹಾಗೂ ಉತ್ತಮ ಆರೋಗ್ಯದ ಜೊತೆಗೆ ಹೆಚ್ಚು ಕ್ರಿಯಾಶೀಲರಾಗಿರಲು ಅನುಕೂಲವಾಗುತ್ತದೆ ಎಂದು ಬಾಗಮಾರ ಸೇವಾ ಸಮಿತಿಯ ಭಗವಾನ್ ಮಹಾವೀರ ಜೈನ್ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಅಧ್ಯಕ್ಷ ಅಶೋಕುಮಾರ ಬಾಗಮಾರ ಹೇಳಿದರು.

ಪಟ್ಟಣದ ಭಗವಾನ್ ಮಹಾವೀರ ಜೈನ್ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಆವರಣದಲ್ಲಿ ಬೃಂದಾವನ ಎಂಟರ್‌ಪ್ರೈಸಸ್ ಹಾಗೂ ಗಜೇಂದ್ರಗಡ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಆಯೋಜಿಸಿದ್ದ ವೈಟ್ ಲೆದರ್ ಬಾಲ್ ಮುಕ್ತ ಪ್ರೀಮಿಯಂ ಕ್ರಿಕೆಟ್ ಲೀಗ್ ಉದ್ಘಾಟಿಸಿ ಮಾತನಾಡಿದರು.

ಯುವಕರು ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು. ಹೊರತಾಗಿ, ದುಶ್ಚಟಗಳಿಗೆ ಬಲಿಯಾಗಿ ಉತ್ತಮ ಆರೋಗ್ಯವನ್ನು ಹಾಳು ಮಾಡಿಕೊಳ್ಳಬೇಡಿ. ಕ್ರೀಡೆಗಳಲ್ಲಿಯೇ ಕ್ರಿಕೆಟ್ ಎಲ್ಲರಿಗೂ ಅಚ್ಚುಮೆಚ್ಚು. ಎಲ್ಲಾ ವಯೋಮಾನದವರೂ ಕ್ರಿಕೆಟ್ ಆಡುತ್ತಾರೆ. ಕ್ರೀಡೆಯಲ್ಲಿ ಸ್ಪರ್ಧಾ ಮನೋಭಾವ ಇರಬೇಕೇ ಹೊರತು ಸಂಘರ್ಷದ ಮನೋಭಾವ ಇರಬಾರದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಸ್.ಎಚ್. ಸೋಂಪುರ, ಶಿವು ಜಾಲಿಹಾಳ, ಖಾಜಾಹುಸೇನ್ ಸರಕಾವಸ್, ರಾಚಯ್ಯ ಕಪ್ಲಿಮಠ, ಸಂಗಯ್ಯ ಹಿರೇಮಠ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು, ಕ್ರೀಡಾ ಆಯೋಜಕರ ಕಾರ್ಯವನ್ನು ಶ್ಲಾಘಿಸಿದರು. ಸ್ಪರ್ಧೆಯಲ್ಲಿ ಭಾಗವಹಿಸಿದ ತಂಡಗಳಿಗೆ ಶುಭ ಹಾರೈಸಿ, ಕ್ರೀಡೆಗಳ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಯುವಕರು ಮುಂದಾಗಬೇಕೆಂದು ಕರೆ ನೀಡಲಾಯಿತು.

# ಪೋಲಿಯೋ ಲಸಿಕೆ ತಪ್ಪದೇ ಹಾಕಿಸಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕಾಗಿ 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಎರಡು ಹನಿ ಪಲ್ಸ್ ಪೋಲಿಯೋ ಲಸಿಕೆ ತಪ್ಪದೇ ಹಾಕಿಸಿ ಎಂದು ತಾಲೂಕಾ ವೈದ್ಯಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ ಹೇಳಿದರು.

ಅವರು ಪಟ್ಟಣದ ಸಮುದಾಯ ಅರೋಗ್ಯ ಕೇಂದ್ರದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಮಾತನಾಡಿ, ಪೋಷಕರು ಯಾವುದೇ ವದಂತಿಗಳಿಗೆ ಕಿವಿಕೊಡದೇ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಿ ಪೋಲಿಯೋ ಮುಕ್ತ ಸಮಾಜಕ್ಕಾಗಿ ಕೈಜೋಡಿಸಬೇಕು. ಡಿ.24ರೊಳಗೆ 5 ವರ್ಷದ ಮಕ್ಕಳಿಗೆ ಹತ್ತಿರ ಪೋಲಿಯೋ ಕೇಂದ್ರಗಳಿಗೆ ಭೇಟಿ ಕೊಟ್ಟು ಪೋಲಿಯೋ ಹಾಕಿಸಿ. ತಾಲೂಕಿನಲ್ಲಿ ಅರೋಗ್ಯ ಕಾರ್ಯಕರ್ತೆಯರು, ಆಶಾ-ಅಂಗನವಾಡಿ ಕಾರ್ಯಕರ್ತೆಯರು ಈ ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದಾರೆ. ತಾಲೂಕಿನಲ್ಲಿ ಒಟ್ಟು 12050 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಿದ್ದೇವೆ. ಪೋಲಿಯೊ ರೋಗ ಬರದಂತೆ ತಡೆಯುವುದು ಎಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಈ ವೇಳೆ ಡಾ. ಪ್ರವೀಣ ಸಜ್ಜನ, ಅರೋಗ್ಯ ಶಿಕ್ಷಣಾಧಿಕಾರಿ ಪ್ರಕಾಶ ಕರ್ಜಗಿ, ಎಫ್.ಸಿ. ಹೊಸಮಠ, ಗಂಗಾಧರ ಮೆಣಸಿನಕಾಯಿ, ಪ್ರವೀಣ ಬೋಮಲೆ, ನವೀನ ಹಿರೇಮಠ, ಬಸವರಾಜ ಕಲ್ಲೂರ, ವಿಜಯ ಕುಂಬಾರ, ದುಂಡೇಶ ಕೋಟಗಿ, ಜಾಹೀರ. ಮೊಮೀನ್, ಮಂಜುನಾಥ ಬಸಾಪುರ, ರಮೇಶ ಹಾಳದೋಟದ, ಭೀಮಣ್ಣ ಯಂಗಾಡಿ, ರವಿ ಕೋರಿ, ರುದ್ರಪ್ಪ ಉಮಚಗಿ, ಸಿಬ್ಬಂದಿಗಳಾದ ಶ್ವೇತಾ ಶಿರೋಳ, ಆಶಾ ಭಂಡಾರಿ, ರೇಣುಕಾ ಡೊಂಬರ, ಸುಧಾ ಕಂತ್ರೋಜಿ, ಬಿ.ಎಸ್. ನಾಗಣ್ಣವರ, ರೇಖಾ ಶಿರಹಟ್ಟಿ, ಸೀತಾ ಅಮ್ಮಿನಬಾವಿ ಮುಂತಾದವರು ಇದ್ದರು. ಪಟ್ಟಣದ ಬಸ್ ನಿಲ್ದಾಣ, ಮಾರ್ಕೆಟ್-ಶಾಲೆ, ಅಂಗನವಾಡಿ, ದೇವಸ್ಥಾನ ಸೇರಿ ಸಾರ್ವಜನಿಕ ಸ್ಥಳಗಳಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ ಪೋಲೀಯೋ ಹನಿ ಹಾಕುವ ಕಾರ್ಯ ಮಾಡಿದರು.

ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ, ಸ್ನೇಹ ಸಮ್ಮಿಲನ ಕಾರ್ಯಕ್ರಮ

# ಗುರುಗಳು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪ್ರತಿಯೊಬ್ಬ ವಿದ್ಯಾರ್ಥಿಯ ಸುಂದರ ಬದುಕು ನಿರ್ಮಿಸುವಾತ ಗುರು. ವಿದ್ಯಾರ್ಥಿ ಜೀವನಕ್ಕೆ ರೂಪ ಕೊಟ್ಟ ಗುರುವನ್ನು ಎಂದೂ ಮರೆಯದಿರಿ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಎಸ್‌ಜೆಎಂ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದಲ್ಲಿ 2002-03ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಹಮ್ಮಿಕೊಂಡಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಪ್ರತಿಯೊಂದು ಕಾರ್ಯಕ್ಕೂ ಗುರು ಬೇಕು. ಅದರಂತೆ ವಿದ್ಯಾರ್ಥಿ ಜೀವನಕ್ಕೆ ಗುರು ತುಂಬಾ ಅವಶ್ಯವಾಗಿದ್ದು, ಗುರುವಿನ ಮಾರ್ಗದರ್ಶನದಲ್ಲಿ ನಡೆದರೆ ಸನ್ಮಾರ್ಗ ಪ್ರಾಪ್ತಿಯಾಗುವುದರ ಜೊತೆಯಲ್ಲಿ ಸಮಾಜವೂ ಸನ್ಮಾರ್ಗದಲ್ಲಿ ನಡೆಯಲು ಸಾಧ್ಯವಾಗುವುದು. ವಿದ್ಯಾರ್ಥಿಗಳು ಗುರುಗಳು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಿದಾಗ ಸುಂದರ ಸಮಾಜ ನಿರ್ಮಿಸಲು ಸಾಧ್ಯ ಎಂದರು.



ವಿದ್ಯಾರ್ಥಿ ಮಹೇಶ ಶಿರಹಟ್ಟಿ ಮಾತನಾಡಿ, 23 ವರ್ಷಗಳ ಹಿಂದೆ ನಾವು ಒಂದು ಮಣ್ಣಿನ ಮುದ್ದೆಯಂತಿದ್ದೆವು. ನಮಗೆ ರೂಪ ಕೊಟ್ಟು ಮೂರ್ತಿಯನ್ನಾಗಿ ರೂಪಿಸಿದವರು ಗುರುಗಳು. ಅವರ ಋಣವನ್ನು ಎಂದಿಗೂ ತೀರಿಸಲಾಗದು ಎಂದರು. ಕಲಿಸಿದ ಗುರುಗಳನ್ನು ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದಿಂದ ಬಾಲಲೀಲಾ ಮಾಹಾಂತ ಶಿವಯೋಗಿ ಕಲಾ ಭವನದವರೆಗೂ ವಿಶೇಷವಾಗಿ ಹೂವಿನ ಸುರಿಮಳೆಯೊಂದಿಗೆ ಗೌರವದಿಂದ ಬರಮಾಡಿಕೊಂಡರು. ಕಲಿಸಿದ ಗುರುಗಳನ್ನು ಹಾಗೂ ಸಂಸ್ಥೆಯ ಆಡಳಿತ ಮಂಡಳಿಯವರನ್ನು ಸನ್ಮಾನಿಸಲಾಯಿತು. ಸಾನ್ನಿಧ್ಯವನ್ನು ನೀಲಗುಂದದ ಗುದ್ನೇಶ್ವರ ಮಠದ ಪ್ರಭುಲಿಂಗದೇವರು ವಹಿಸಿದ್ದರು. ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎಂ.ಡಿ. ಬಟ್ಟೂರ ವಹಿಸಿದ್ದರು. ಶಿಕ್ಷಣ ಪ್ರೇಮಿಗಳಾದ ಗೌರಮ್ಮ ಬಡ್ನಿ ಕಾರ್ಯಕ್ರಮ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಡಾ. ಎಸ್.ಸಿ. ಚವಡಿ, ಬಿ.ಸಿ. ಬಡ್ನಿ, ಎಂ.ಎಂ. ಅದರಗುಂಚಿ, ಎಫ್. ಎಸ್. ಅಮೋಘಿಮಠ, ಎಸ್.ಸಿ. ಕುರ್ತಕೋಟಿ, ವಿಜಯ ನೀಲಗುಂದ, ಕಾಲೇಜಿನ ಪ್ರಾಚಾರ್ಯ ಎ.ಎಂ. ಅಂಗಡಿ, ಮುಖ್ಯೋಪಾಧ್ಯಾಯ ಇ.ಎಂ. ಗುಳೇದಗುಡ್ಡ, ಬಿ.ಜಿ. ಯಳವತ್ತಿ, ವಾಯ್.ಎಚ್. ಚಲವಾದಿ, ಚಂದ್ರಶೇಖರ ಎಸ್, ಎಸ್.ಎಫ್. ಮುದ್ದಿನಗೌಡ್ರ, ಆರ್. ಆರ್. ಪಟ್ಟಣ ಸೇರಿದಂತೆ ಹಳೆಯ ವಿದ್ಯಾರ್ಥಿಗಳು ಇದ್ದರು.

ಅಧ್ಯಕ್ಷತೆ ವಹಿಸಿದ್ದ ಎಂ.ಡಿ. ಬಟ್ಟೂರ ಮಾತನಾಡಿ, ಅಜ್ಞಾನದ ಕತ್ತಲೆ ಕಳೆದು ಸುಜ್ಞಾನದ ಹಾದಿಯಲ್ಲಿ ಸಾಗಲು ಪ್ರತಿಯೊಬ್ಬ ವಿದ್ಯಾರ್ಥಿಗೆ ಗುರುವಿನ ಮಾರ್ಗದರ್ಶನ ಬೇಕು. ವಿದ್ಯಾರ್ಥಿ ಜೀವನ ಬಂಗಾರದ ಜೀವನವಾಗಲು ಗುರುವಿನ ಅನುಗ್ರಹ ಇರಬೇಕು ಎಂದರು.

# ಪಲ್ಸ್ ಪೋಲಿಯೋ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ದೇಶವನ್ನು ಪೋಲಿಯೋ ಮುಕ್ತವಾಗಿಸುವ ಉದ್ದೇಶದಿಂದ ಸರ್ಕಾರದ ವತಿಯಿಂದ ಆಯೋಜಿಸಿದ್ದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ತಾಲೂಕಿನಾದ್ಯಂತ ಯಶಸ್ವಿಯಾಗಿ ನಡೆಯಿತು.

ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಕಾರ್ಯವನ್ನು ಸರ್ಕಾರಿ ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಅಂಗನವಾಡಿಗಳು ಹಾಗೂ ಬೂತ್ ಕೇಂದ್ರಗಳಲ್ಲಿ ನಡೆಸಲಾಯಿತು.

ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆದ ಈ ಅಭಿಯಾನಕ್ಕೆ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಸಹಕಾರ ನೀಡಿದರು. ಕೊಡಗಾನೂರ ಗ್ರಾಮದ ಅಂಗನವಾಡಿ ಲಸಿಕಾ ಬೂತ್‌ನಲ್ಲಿ ಲಸಿಕೆ ಅಭಿಯಾನದಲ್ಲಿ ಪಾಲ್ಗೊಂಡಿದ್ದ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿ ರೇಖಾ ಕಳ್ಳಿಮಠ ಮಾತನಾಡಿ, ಪೋಲಿಯೋ ರೋಗವನ್ನು ಸಂಪೂರ್ಣ ನಿರ್ಮೂಲನೆ ಮಾಡಲು ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸಲು ಮುಂದಾಗಬೇಕು. ಈ ಲಸಿಕೆ ಸುರಕ್ಷಿತವಾಗಿದ್ದು, ಯಾವುದೇ ಅಡ್ಡ ಪರಿಣಾಮಗಳಿಲ್ಲ ಎಂದು ಹೇಳಿದರು.



**ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ದಿನದರ್ಶಿಕೆ ಬಿಡುಗಡೆ, ಸಾಧಕರಿಗೆ ಸನ್ಮಾನ**

# ಪಂಚ ಕಸುಬುಗಳಲ್ಲಿ ತಂತ್ರಜ್ಞಾನ ಅಳವಡಿಸಿಕೊಳ್ಳಿ



ಸಮಾರಂಭ ಉದ್ಘಾಟಿಸಿದ ವಿ.ಪ ಸದಸ್ಯ ಪ್ರೊ. ಎಸ್.ವಿ. ಸಂಕನೂರ ಮಾತನಾಡಿ, ಭಾರತೀಯ ಸಂಸ್ಕೃತಿ, ಪರಂಪರೆ, ಸಂಸ್ಕಾರಗಳನ್ನು ಉಳಿಸಿ-ಬೆಳೆಸುವಲ್ಲಿ ವಿಶ್ವಕರ್ಮರ ಪಾತ್ರ ಹಿರಿದಾಗಿದೆ.

ಇಂದಿನ 21ನೇ ಶತಮಾನ ಜ್ಞಾನ, ವಿದ್ಯೆ, ಕೌಶಲ್ಯಗಳ ಯುಗವಾಗಿದ್ದು, ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ರಾಜಕೀಯವಾಗಿ ಹಿಂದುಳಿದಿರುವ ವಿಶ್ವಕರ್ಮ ಸಮಾಜ ಬಾಂಧವರು ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡಬೇಕು. ಶಿಕ್ಷಣವೇ ಇಂದಿನ ಶ್ರೇಷ್ಠ ಸಿರಿವಂತಿಕೆಯಾಗಿದೆ ಎಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾಜಿಕ ಜೀವನಕ್ಕೆ ಪೂರಕವಾದ ವಿಶ್ವಕರ್ಮ ಸಮಾಜದ ಪಂಚ ಕಸಬುಗಳು ಪಾರಂಪರಿಕತೆಯಿಂದ ಕೂಡಿದ್ದು, ಇಂದಿನ ಆಧುನಿಕತೆಗೆ ತಕ್ಕಂತೆ ತಂತ್ರಜ್ಞಾನ, ಕಂಪ್ಯೂಟರ್ ಡಿಸೈನ್‌ಗಳನ್ನು ಅಳವಡಿಸಿಕೊಳ್ಳುವ ಮೂಲಕ ಕಸಬುಗಳಲ್ಲಿ ತಂತ್ರಜ್ಞಾನ ಬಳಸಿಕೊಂಡು ಸಮಾಜ ಬಾಂಧವರು ಆರ್ಥಿಕ ಪ್ರಗತಿ ಸಾಧಿಸುವತ್ತ ಮುಂದಡಿ ಇಡಬೇಕು ಎಂದು ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಸುಜ್ಞಾನಮೂರ್ತಿ ಪಿ ಹೇಳಿದರು.

ಅವರು ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ವತಿಯಿಂದ ರವಿವಾರ ನಗರದ ವಿಜಯನಗರ ಬಡಾವಣೆಯ ವಿಶ್ವಕರ್ಮ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ 2026ರ ದಿನದರ್ಶಿಕೆ ಬಿಡುಗಡೆ ಹಾಗೂ ಸನ್ಮಾನ ಸಮಾರಂಭದ ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ಸನ್ಮಾನ ಸ್ವೀಕರಿಸಿ ಮಾತನಾಡಿದರು.

ರಾಜ್ಯ ಹಾಗೂ ಕೇಂದ್ರ ಸರ್ಕಾಗಳು ಹಿಂದುಳಿದವರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿವೆ. ವಿಶ್ವಕರ್ಮ ಅಭಿವೃದ್ಧಿ ನಿಗಮ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಅವುಗಳ ಮಾಹಿತಿ ಪಡೆದು ಸಮಾಜ ಬಾಂಧವರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ವಿಶ್ವಕರ್ಮ ಸುಮುದಾಯಗಳ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಬಾಬು ಪತ್ತಾರ ಮಾತನಾಡಿ, ಇತ್ತೀಚೆಗೆ ವಿಶ್ವಕರ್ಮ ಸಮುದಾಯ ಸಮರ್ಥವಾಗಿ ಸಂಘಟಿತವಾಗುತ್ತಿದ್ದು, ಇದರೊಟ್ಟಿಗೆ ರಾಜಕೀಯ ಕ್ಷೇತ್ರದಲ್ಲಿ ಕೂಡಾ ಛಾಪು ಮೂಡಿಸುತ್ತ ಸಾಗಬೇಕು. ಎಲ್ಲ ರಂಗಗಳಲ್ಲಿಯೂ ನಾವು ಮುಂದೆ ಬರಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ ಮಾತನಾಡಿ, ಮುಂಬರುವ ಸಂಘದ ದಶಮಾನೋತ್ಸವ ಆಚರಣೆಗೆ ಸರ್ವರೂ ಸಹಕಾರ ನೀಡಬೇಕು. ಜಿಲ್ಲೆಯ ಪ್ರತಿಯೊಂದು ವಿಶ್ವಕರ್ಮ ಸಮಾಜದ ಮನೆ-ಮನೆಗಳಿಗೆ 2026ರ ದಿನದರ್ಶಿಕೆಯನ್ನು ಉಚಿತವಾಗಿ ವಿತರಿಸಲಾಗುವುದು ಎಂದರು.

ಚಿಕ್ಕುಂಬಿಯ ನಾಗಲಿಂಗೇಶ್ವರ ಮಠದ ಶ್ರೀ ಅಭಿನವ ನಾಗಲಿಂಗ ಮಹಾಸ್ವಾಮೀಜಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಕರ್ನಾಟಕ ರಾಜ್ಯ ವಿಶ್ವಕರ್ಮ ಸಮಾಜದ ಅಧ್ಯಕ್ಷ ಈಶ್ವರಾಚಾರ್ಯ ಎಂ.ಪಿ, ನೌಕರರ ಸಂಘದ ನಿರ್ದೇಶಕ ಬಿ.ಎಂ. ಬಡಿಗೇರ ಸಮಾರಂಭ ಉದ್ದೇಶಿಸಿ ಮಾತನಾಡಿದರು.

2025ರ ರಾಷ್ಟ್ರ ಹಾಗೂ 2014 ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಚಂದ್ರಶೇಖರ ವಾಯ್.ಶಿಲ್ಪಿ ಕಲಬುರ್ಗಿ ಹಾಗೂ ಬಾಗಲಕೋಟಿಯ ನಾಗಲಿಂಗಪ್ಪ ಗಂಗೂರ, ಮತ್ತು ಗದಗ ಶ್ರೀಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಉಮೇಶ ಕೆ.ಅರ್ಕಸಾಲಿ, ಪತ್ರಕರ್ತ ಮೌನೇಶ ಸಿ.ಬಡಿಗೇರ(ನರೇಗಲ್ಲ), ಟಿವಿ ವರದಿಗಾರರಾದ ಗಿರೀಶ ಕಮ್ಮಾರ ಮತ್ತು ಮಂಜುನಾಥ ಪತ್ತಾರ ಇವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ವರವಿ ಕ್ಷೇತ್ರದ ಶ್ರೀಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ನರಗುಂದ, ಗೌರವಾಧ್ಯಕ್ಷ ಎ.ಎನ್. ಬಡಿಗೇರ, ನಿರ್ದೇಶಕ ಬಿ.ಎಮ್. ಬಡಿಗೇರ, ಪ್ರಮುಖರಾದ ಮೌನೇಶ ಅರ್ಕಸಾಲಿ, ಶ್ರೀಧರ ಕೊಣ್ಣೂರ, ಕೆ.ಎಸ್. ಬಡಿಗೇರ, ರಿಂದಮ್ಮ ಬಡಿಗೇರ, ಶಿವಲೀಲಾ ಕೆ.ಬಡಿಗೇರ, ಪ್ರಧಾನ ಕಾರ್ಯದರ್ಶಿ ಸಿ.ವಿ. ಬಡಿಗೇರ ಉಪಸ್ಥಿತರಿದ್ದರು.

ಕೊಪ್ಪಳದ ಎಸ್.ಎನ್. ಬಡಿಗೇರ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಖಿ.ಎಸ್. ಬಡಿಗೇರ ಸ್ವಾಗತಿಸಿದರು. ಸುಮಂಗಲಾ ಪತ್ತಾರ ಕಾರ್ಯಕ್ರಮ ನಿರೂಪಿಸಿದರು. ಆರ್.ಎಮ್. ಬಡಿಗೇರ ವಂದಿಸಿದರು.

# ಯೋಗಕ್ಕೆ ತನ್ನದೇ ಆದ ಮಹತ್ವವಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಹೆಣ್ಣುಮಕ್ಕಳ ಪ್ರೌಢಶಾಲೆಯಲ್ಲಿ ಲಕ್ಷ್ಮೇಶ್ವರದ ಕರ್ನಾಟಕ ಗ್ರಾಮೀಣಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಹಾಗೂ ಯೋಗ ಸಾಧಕರ ಸಮಿತಿ ಇವರ ಸಹಯೋಗದಲ್ಲಿ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಫಲಿತಾಂಶ ಆಧಾರಿತ ಯೋಗ ಮತ್ತು ಧ್ಯಾನ ತರಬೇತಿಯನ್ನು ಪ್ರಾರಂಬಿಸಲಾಯಿತು.

ಯೋಗ ಸಂಸ್ಥೆಯ ಅಧ್ಯಕ್ಷ ದಶರಥ ಕೋಟೆಗೌಡ್ರ ಮಕ್ಕಳಿಗೆ ಯೋಗ ತರಬೇತಿ ನೀಡಿ ಮಾತನಾಡಿ, ಭಾರತದಲ್ಲಿ ಸಾವಿರಾರು ವರ್ಷಗಳಿಂದಲೂ ಯೋಗಕ್ಕೆ ತನ್ನದೇ ಆದ ಮಹತ್ವವಿದ್ದು, ಇಂದು ಜಗತ್ತಿನ ಎಲ್ಲ ರಾಷ್ಟ್ರಗಳು ಯೋಗವನ್ನು ಅಳವಡಿಸಿಕೊಳ್ಳುತ್ತಿವೆ. ಯೋಗ ಮತ್ತು ಧ್ಯಾನ ವಿದ್ಯಾರ್ಥಿಗಳಿಗೆ ಬಹಳ ಉತ್ತಮವಾದುದು. ನಿತ್ಯ ನಿರಂತರ ಸಾಧನೆ ಮಾಡಿದರೆ ಓದಲು ಮತ್ತು ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಲು ಸಹಾಯಕವಾಗುತ್ತದೆ. ಡಿಸೆಂಬರ್ 21 ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಮಕ್ಕಳಿಗೆ ಧ್ಯಾನ ಮತ್ತು ಯೋಗದ ತರಬೇತಿಗಳನ್ನು ನೀಡಲಾಗುತ್ತಿದ್ದು, ಮಕ್ಕಳು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ ಮಾತನಾಡಿ, ಧ್ಯಾನ ವಿದ್ಯಾರ್ಥಿಗಳ ಜೀವನದಲ್ಲಿ ಬಹಳ ಪ್ರಮುಖ ಪಾತ್ರ ವಹಿಸುತ್ತದೆ. ಇದು ಮನಸ್ಸನ್ನು ಹತೋಟಿಯಲ್ಲಿಡುವದರ ಜೊತೆಗೆ ಅಭ್ಯಾಸದಲ್ಲಿ ಕೇಂದ್ರೀಕರಿಸುವಂತೆ ಮಾಡುತ್ತದೆ. ಯೋಗ ಮತ್ತು ಧ್ಯಾನಗಳನ್ನು ಅಳವಡಿಸಿಕೊಂಡು ಮಕ್ಕಳು ಉತ್ತಮ ಸಾಧನೆ ಮಾಡುವಂತಾಗಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪ್ರಭಾವತಿ ಪುರಾಣಿಮಠ, ನೀಲಪ್ಪ ತೆಗ್ಗಿನಹಳ್ಳಿ, ವಿದ್ಯಾ ಗಾಂಜಿ, ಹಾಗೂ ಪ್ರೌಢಶಾಲೆಯ ಎಲ್ಲಾ ಶಿಕ್ಷಕ-ಶಿಕ್ಷಕಿಯರು ಭಾಗವಹಿಸಿದ್ದರು.

# ತಪ್ಪದೇ ಪೋಲಿಯೋ ಹನಿ ಹಾಕಿಸಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳು ದೇಶದ ಸಂಪತ್ತು, ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಿಸಲು ಪಲ್ಸ್ ಪೋಲಿಯೋ ಹನಿ ತಪ್ಪದೇ ಹಾಕಿಸಬೇಕು ಎಂದು ಮುಳಗುಂದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಪ್ರವೀಣ ತುಪ್ಪದ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಂದಿನ ಮಕ್ಕಳೇ ಭವಿಷ್ಯದ ಉತ್ತಮ ಪ್ರಜೆಗಳು. ಮಕ್ಕಳ ಆರೋಗ್ಯ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಯಾವುದೇ ಆತಂಕ ಪಡದೇ ಪೋಷಕರು 5 ವರ್ಷದ ಒಳಗಿನ ಮಕ್ಕಳಿಗೆ ತಪ್ಪದೇ ಪಲ್ಸ್ ಪೋಲಿಯೋ ಹನಿ ಹಾಕಿಸಿ ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಿಸಿ ಎಂದರು.

ನಿವೃತ್ತ ಆರ್‌ಟಿಓ ಬಿ.ಡಿ. ಹರ್ತಿ ಮಕ್ಕಳಿಗೆ ಪಲ್ಸ್ ಪೋಲಿಯೋ ಹನಿ ಹಾಕಿ ಮಾತನಾಡಿ, ಪೋಲಿಯೋ ಒಂದು ಮಾರಕ ಖಾಯಿಲೆಯಾಗಿದ್ದು, ಈ ಖಾಯಿಲೆಗೆ ಹೋಗಲಾಡಿಸಲು ಪಲ್ಸ್ ಪೋಲಿಯೋ ಹನಿಯನ್ನು ಹಾಕಿಸುವ ಮೂಲಕ ಮಕ್ಕಳ ಉತ್ತಮ ಭವಿಷ್ಯಕ್ಕೆ ಸಹಕರಿಸಬೇಕು ಎಂದರು.

ಈ ಸಂದರ್ಭದಲ್ಲಿ ಡಾ. ಎಸ್.ಸಿ. ಚವಡಿ, ಎಸ್.ಸಿ. ಬಡ್ನಿ, ಅಂಗನವಾಡಿ ಶಿಕ್ಷಕಿ ಎಂ.ಎಂ. ಅಬ್ಬುನವರ, ರೇಣುಕಾ ಯಲಿಗಾರ, ಆರೋಗ್ಯ ಸಿಬ್ಬಂದಿ ನಜೀರ ನದಾಫ್, ಶಿವಾನಂದ ಆಪ್ತಗೇರಿ, ಮುತ್ತು ಬಳ್ಳಾರಿ, ಸುಮಿತ್ರಾ ಹೊಂಬಳ, ಮಂಜುನಾಥ ದೇಸಾಯಿ, ಕಲ್ಲಪ್ಪ ಚಿನ್ನಿ, ಎಚ್.ಎನ್. ಗದಗ, ಮುನೀರ್ ನದ್ದಿಮುಲ್ಲಾ ಇದ್ದರು.

# ನಿಧನ

## ಅಂಬುಬಾಯಿ ಮಿಸ್ಕಿನ್



**ಗದಗ :** ನಗರದ ಜೋಡಮಾರುತಿ ದೇವಸ್ಥಾನ ಹತ್ತಿರದ ಕಿಲ್ಲಾ ಓಣಿಯ ನಿವಾಸಿ ಅಂಬುಬಾಯಿ ರಾಮನಾಥಸಾ ಮಿಸ್ಕಿನ್ (92) ಅವರು ದಿ.22 ರಂದು ಸೋಮವಾರ ಸಂಜೆ 5 ಗಂಟೆಗೆ ನಿಧನರಾದರು. ಮೃತರಿಗೆ ಸಾಮಾಜಿಕ ಕಾರ್ಯಕರ್ತರಾದ ಪರಶುರಾಮ ರಾಮನಾಥಸಾ ಮಿಸ್ಕಿನ ಸೇರಿದಂತೆ ಐವರು ಪುತ್ರರು, ಪುತ್ರಿ, ಅಳಿಯ-ಸೊಸೆಯಂದಿರು. ಮೊಮ್ಮಕ್ಕಳು ಮರಿ ಮೊಮ್ಮಕ್ಕಳು ಸೇರಿದಂತೆ ಅಪಾರ ಬಂದು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತಿಮ ಯಾತ್ರೆಯು ದಿ.23 ರಂದು ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಸ್ವಗೃಹದಿಂದ ಹೊರಡುವುದು.

**ಸಂತಾಪ :** ಅಂಬುಬಾಯಿ ಮಿಸ್ಕಿನ ಅವರ ನಿಧನಕ್ಕೆ ಗದಗ ಎಸ್ ಎಸ್ ಕೆ ಸಮಾಜ ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ, ಸರಕಾರಿ ಕಾಮ-ರತಿ ಉತ್ಸವ ಸಮಿತಿ ಕಿಲ್ಲಾ ಓಣಿ, ಗಣೇಶ ಉತ್ಸವ ಸಮಿತಿ, ರಾಮನವಮಿ ಉತ್ಸವ ಸಮಿತಿ ಹಾಗೂ ಸಮಾಜ ಬಾಂಧವರು ಸಂತಾಪ ಸೂಚಿಸಿದ್ದಾರೆ.

**ಕಪ್ಪತ್ತಗುಡ್ಡದಲ್ಲಿ ಕಾಡ್ಗಿಚ್ಚು ತಡೆ ಜಾಗೃತಿ ಕಾರ್ಯಕ್ರಮ, ವಾಲಿಬಾಲ್ ಪಂದ್ಯಾವಳಿ**

# ಪರಿಸರ ಉಳಿಸಲು ಸಾರ್ವಜನಿಕರ ಸಹಕಾರ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಡಂಬಳ

ಜನತೆಯ ಸಹಕಾರ ಇದ್ದಾಗ ಪರಿಸರವನ್ನು ಉಳಿಸಿ-ಬೆಳೆಸಿ, ಅರಣ್ಯ ಅಪಾರವಾಗಿ ಬೆಳೆಯಲು ಸಾಧ್ಯ ಎಂದು ಕಪ್ಪತ್ತಗುಡ್ಡದ ನಂದಿವೇರಿ ಮಠದ ಶಿವಕುಮಾರ ಮಹಾಸ್ವಾಮಿಗಳು ನುಡಿದರು.

ಡಂಬಳ ಹೋಬಳಿಯ ಡೋಣಿ ಗ್ರಾಮದ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ಗದಗ ಪ್ರಾದೇಶಿಕ ವಿಭಾಗ, ಕಪ್ಪತ್ತಗುಡ್ಡ ವನ್ಯಜೀವಿ ಧಾಮದಲ್ಲಿ ವಾಲಿಬಾಲ್ ಪಂದ್ಯಾವಳಿ, ಕಾಡ್ಗಿಚ್ಚು ತಡೆ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಶ್ರೀಗಳು ಮಾತನಾಡಿದರು.

ರಾಜ್ಯದ 7 ಕೋಟಿ ಕನ್ನಡಿಗರು ಕಪ್ಪತ್ತಗುಡ್ಡದತ್ತ ನೋಡುತ್ತಿದ್ದಾರೆ. ಕಪ್ಪತ್ತಗುಡ್ಡದ ಸಸ್ಯ ಸಂಪತ್ತನ್ನು ಸುತ್ತಮುತ್ತಲಿನ ಗ್ರಾಮಸ್ಥರು ರಕ್ಷಕರಂತೆ ಕಾಪಾಡುವ ಕೆಲಸ ಮಾಡಬೇಕಾಗಿದೆ ಎಂದು ಹೇಳಿದರು.

ರೈತ ಸಂಘದ ಅಧ್ಯಕ್ಷ ಶಂಕರಗೌಡ ಜಾಯನಗೌಡರ, ಎಸ್.ಸಿ ಘಟಕದ ಅಧ್ಯಕ್ಷ ಸೋಮಣ್ಣ ಹೈತಾಪುರ, ಕಪ್ಪತ್ತಗುಡ್ಡ ಸಂರಕ್ಷಣಾ ವೇದಿಕೆಯ ಅಧ್ಯಕ್ಷ ಭರಮಪ್ಪ ಕಿಲಾರಿ ಮಾತನಾಡಿ, ಗಿಡಗಳ, ಪ್ರಾಣಿ-ಪಕ್ಷಿಗಳ ಉಳಿವಿಗಾಗಿ ವಾಲಿಬಾಲ್ ಕ್ರೀಡಾಕೂಟದ ಮೂಲಕ ಯುವಕರಲ್ಲಿ ಜಾಗೃತಿ ಮೂಡಿಸುತ್ತಿರುವ ಹಿರಿಯ ಅರಣ್ಯ ಅಧಿಕಾರಿಗಳ, ಈ ಭಾಗದ ಆರ್‌ಎಫ್‌ಓ ಮಂಜುನಾಥ ಮೇಗಲಮನಿ ಮತ್ತು ಸಿಬ್ಬಂದಿ ವರ್ಗದವರ ಕಾರ್ಯ ಪ್ರಶಂಸನೀಯ ಎಂದು ಹೇಳಿದರು.



ಯುವ ಕವಿ, ಲೇಖಕ ಸಿದ್ದು ಸತ್ಯಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಂಬಳ ಹೋಬಳಿಯ ಗ್ರಾಮಗಳ 485 ಕುರಿ ಕಾಯುವವರಿಗೆ ಹೊಟ್ಟೆ ಚೀಲ, ಬ್ಯಾಟರಿ, ಸ್ಟೀಲ್ ನೀರಿನ ಬಾಟಲ್ ವಿತರಿಸಲಾಯಿತು. ಕೃಷಿಯಲ್ಲಿ ಅರಣ್ಯ ಸಾಧಕರಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 35ಕ್ಕೂ ಅಧಿಕ ಸಾಧಕರಿಗೆ, ಯೋಗಸನದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಮುಂಡರಗಿ ತಾಲೂಕಿನ 23 ಗ್ರಾಮ ಪಂಚಾಯಿತಿಗಳಿಗೆ ಕಪ್ಪತ್ತಗುಡ್ಡದಿಂದ ಆಗುವ ಪರಿಸರದ ಲಾಭಗಳ ಕುರಿತಾದ ಮಾಹಿತಿ ಬೋರ್ಡ್ ವಿತರಿಸಲಾಯಿತು. ಬೈಕ್, ಕಾರ್‌ಗಳಿಗೆ ಕಪ್ಪತ್ತಗುಡ್ಡದ ಹೆಸರಿನಲ್ಲಿ ಪ್ರಾಣಿಗಳ ಭಾವಚಿತ್ರವುಳ್ಳ ಸ್ಟಿಕ್ಕರ್, ಭಿತ್ತಿಪತ್ರ ವಿತರಣೆ ಮಾಡಲಾಯಿತು. ಖ್ಯಾತ ಕಲಾವಿದ ನಿಂಗಪ್ಪ ಗುಡ್ಡದ ಸಂಗಡಿಗರು ಕಪ್ಪತ್ತಗುಡ್ಡದ ಕುರಿತು ಜಾನಪದ ಹಾಡುಗಳನ್ನು ಹಾಡಿ ಜಾಗೃತಿ ಮೂಡಿಸಿದರು.

ಮುಂಡರಗಿ ಆರ್‌ಎಫ್‌ಓ ಮಂಜುನಾಥ ಆರ್.ಮೇಗಲಮನಿ ಮಾತನಾಡಿ, ಮೌಢ್ಯ, ಕಂದಾಚಾರಕ್ಕೆ ಒಳಗಾಗಿ ಬೆಂಕಿ ಹಚ್ಚಬೇಡಿ. ಕಪ್ಪತ್ತಗುಡ್ಡ ಸರಕಾರಿ ಆಸ್ತಿ ಎಂದು ಭಾವಿಸದೆ ನಮ್ಮೆಲ್ಲರ ಆಸ್ತಿ ಎಂದು ಭಾವಿಸಿ ಕಾಪಾಡಬೇಕು. 400ಕ್ಕೂ ಹೆಚ್ಚು ಔಷಧೀಯ ಸಸ್ಯ ಸಂಪತ್ತು, 23ಕ್ಕೂ ಹೆಚ್ಚು ವನ್ಯಪ್ರಾಣಿಗಳ ಸಂಪತ್ತನ್ನು ಕಪ್ಪತ್ತಗುಡ್ಡ ಹೊಂಇದ್ದು, ಇವುಗಳೆಲ್ಲವೂ ನಮ್ಮ ಸಂಪತ್ತು ಎಂದು ಉಳಿಸಿ ಬೆಳೆಸಬೇಕಾಗಿದೆ. ಇದನ್ನು ಉಳಿಸಿದರೆ ನಮ್ಮ ನಿಮ್ಮೆಲ್ಲರ ಮುಂದಿನ ಪೀಳಿಗೆ ಉಳಿಯಲು ಸಾಧ್ಯ. ಅತ್ಯಮೂಲ್ಯ ಸಂಪತ್ತನ್ನು ಉಳಿಸಲು ಅರಣ್ಯ ಇಲಾಖೆಯ ಜೊತೆಗೆ ಸಾರ್ವಜನಿಕರ ಸಹಕಾರ ಮುಖ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವೇ. ಮೂ. ಕುಮಾರಸ್ವಾಮಿ ಮಠದ, ಗ್ಯಾರಂಟಿ ಸಮಿತಿ ಸದಸ್ಯರಾದ ರಾಮಣ್ಣ ಮೇಗಲಮನಿ, ಗ್ರಾ.ಪಂ ಅಧ್ಯಕ್ಷೆ ನೀಲಮ್ಮ ಅಳವಂಡಿ, ಲಕ್ಷ್ಮೀ ಸೊಗಟಿ, ಕಾಶಪ್ಪ ಅಳವಂಡಿ, ಗ್ರಾ.ಪಂ ಮಾಜಿ ಅಧ್ಯಕ್ಷ ರಮೇಶ ಪವಾರ, ಗೌಸಿದ್ಧಯ್ಯ ಹಳ್ಳಿಕೇರಿಮಠ, ನಿಂಗನಗೌಡ ಹರ್ತಿ, ಹನಮಪ್ಪ ಗೋಡಿ, ಕಾಶಪ್ಪ ಹೊನ್ನೂರ, ಸಿದ್ಧನಗೌಡ ಪಾಟೀಲ, ಸತ್ಯಪ್ಪ ಚಲವಾದಿ, ಮಹಾದೇವಪ್ಪ ಗುಂಜಿ, ಭರಮಗೌಡ ಪಾಟೀಲ, ಈಶಪ್ಪ ಓಲಿ, ಮಳ್ಳಪ್ಪ ಜೋಂಡಿ ಸೇರಿದಂತೆ ಯುವಕರು, ವಿದ್ಯಾರ್ಥಿಗಳು, ಗ್ರಾಮಸ್ಥರು ಇದ್ದರು. ಅರಣ್ಯಾಧಿಕಾರಿ ಮೈಲಾರಪ್ಪ ಮಡಿವಾಳರ ವಂದಿಸಿದರು.

# ಕೊಪ್ಪಳ| ಮೊದಲನೇ ಮಹಡಿಯಿಂದ ಬಿದ್ದ ಐದು ವರ್ಷದ ಬಾಲಕ ಬದುಕಿದ್ದೇ ಪವಾಡ!



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕೊಪ್ಪಳ ನಗರದ ಹಮಾಲರ ಕಾಲೋನಿಯಲ್ಲಿ ಐದು ವರ್ಷ ಬಾಲಕ ಮನೆಯ ಮೊದಲನೇ ಮಹಡಿಯಿಂದ ಕೆಳಗೆ ಬಿದ್ದು ಗಂಭೀರ ಗಾಯಗೊಂಡಿರುವಂತಹ ಘಟನೆ ಜರುಗಿದೆ.

ಸಾವು ಗೆದ್ದು ಬಂದ ಬಾಲಕನನ್ನು ಮಹಮ್ಮದ್ ಹ್ಯಾರಿಸ್ ಎಂದು ಗುರುತಿಸಲಾಗಿದೆ. ಕೊಪ್ಪಳ ನಗರದ ಹಮಾಲರ ಕಾಲೋನಿಯಲ್ಲಿ ಐದು ವರ್ಷದ ಬಾಲಕ ಮಹಮ್ಮದ್ ಹ್ಯಾರಿಸ್ ಭಾನುವಾರ ಮಧ್ಯಾಹ್ನ ಮೊದಲನೇ ಮಹಡಿಯಲ್ಲಿ ಪೇಪರ್ ನಿಂದ ಪಾರಿವಾಳ ಮಾಡಿ ಆಟವಾಡುತ್ತಿದ್ದ. ಅದನ್ನು ಗಾಳಿಗೆ ತೂರಿ ಹಿಡಿಯಲು ಹೋದಾಗ ಮೊದಲನೇ ಮಹಡಿಯಿಂದ ಕೆಳಗಡೆ ಬಿದ್ದಿದ್ದಾನೆ. ಮಹಮ್ಮದ್ ಕೆಳಗಡೆ ಬಿಳ್ಳುವ ಭೀಕರ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆ ಆಗಿದೆ.

ಮನೆಯ ಕೆಳಗಡೆ ಮಹಮ್ಮದ್ ಹ್ಯಾರಿಸ್ ಸಹೋದರಿ ಕೂಡ ಆಟವಾಡುತ್ತಿದ್ದು, ಮಹಮ್ಮದ್ ಬಿದ್ದ ತಕ್ಷಣ ಮೇಲೆ ಎತ್ತಿದ್ದಾಳೆ. ಒಳಗಡೆಯಿಂದ ಪೋಷಕರು ಕಿರುಚುತ್ತಾ ಓಡೋಡಿ ಬಂದಿದ್ದಾರೆ. ಕೆಳಗಡೆ ಬಿದ್ದ ಮಗುವನ್ನ ಕೂಡಲೇ ಕೊಪ್ಪಳದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ವೈದ್ಯರು ಮಹಮ್ಮದ್ ಗೆ 2 ಗಂಟೆಯೊಳಗೆ ಆಪರೇಷನ್ ಮಾಡಿದ್ದಾರೆ. ಸದ್ಯ ಬಾಲಕ ಪ್ರಾಣಾಪಾಯದಿಂದ ಪಾರಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾನೆ ಎಂದು ತಿಳಿದು ಬಂದಿದೆ.

# ಭೀಕರ ಅಗ್ನಿ ಅವಘಡ; ಲಕ್ಷಾಂತರ ರೂ.ನಷ್ಟ



■ವಿಜಯಸಾಕ್ಷಿ ಸುದ್ದಿ, ಗದಗ

ಸೋಮವಾರ ಬೆಳ್ಳಂ ಬೆಳಗ್ಗೆ ಸಂಭವಿಸಿದ ಭಾರೀ ಅಗ್ನಿ ಅವಘಡದಲ್ಲಿ ಶಾಂತಿ ಚಿತ್ರಮಂದಿರ ಸುಟ್ಟು ಭಸ್ಮವಾಗಿರುವ ಘಟನೆ ಗದಗ ನಗರದಲ್ಲಿ ಜರುಗಿದೆ.

ಬೆಂಕಿ ಕೆನ್ನಾಲಿಗೆಗೆ ಚಿತ್ರಮಂದಿರದ ಎಲ್ಲ ಕಟ್ಟಡ, ಕುರ್ಚಿ, ಫ್ಯಾನ್, ಸ್ಪೀಕರ್, ಪಿಓಪಿ ಸೇರಿದಂತೆ ಎಲ್ಲಾ ವಸ್ತುಗಳು ಸುಟ್ಟು ಹೋಗಿವೆ.

ಸುದ್ದಿ ತಿಳಿದ ಕೂಡಲೇ ಸ್ಥಳಕ್ಕೆ ಬಂದ ಬೆಟಗೇರಿ ಬಡಾವಣೆ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯ ಮಾಡಿದ್ದಾರೆ.

ಬೆಂಕಿ ಅವಘಡಕ್ಕೆ ಕಾರಣ ಇನ್ನೂ ತಿಳಿದು ಬಂದಿಲ್ಲ. ಈ ಘಟನೆ ಸ್ಥಳೀಯರಲ್ಲಿ ಆತಂಕ ಮೂಡಿಸಿದ್ದು, ಪೊಲೀಸರ ತನಿಖೆಯ ನಂತರವೇ ಸತ್ಯಾಸತ್ಯತೆ ತಿಳಿದು ಬರಬೇಕಿದೆ. ಬೆಟಗೇರಿ ಬಡಾವಣೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ಜರುಗಿದೆ.





**ಗದಗ :** ರಾಜ್ಯ ಸರ್ಕಾರ ನೌಕರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಜನವರಿ 3 ಮತ್ತು 4ರಂದು ನಡೆಯಲಿರುವ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸಮಾರಂಭದ ಕಾರ್ಯಕ್ರಮಕ್ಕೆ ಕಾನೂನು ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ಹಾಗೂ ವಿಧಾನ ಪರಿಷತ್ ಶಾಸಕ ಎಸ್ ವಿ ಸಂಕನೂರ ಅವರನ್ನು ಗದಗ ಜಿಲ್ಲಾ ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ನೇತೃತ್ವದ ನೌಕರ ನಿಯೋಗ ಆಹ್ವಾನ ಪತ್ರಿಕೆ ನೀಡಿ ಆಹ್ವಾನಿಸಿದರು.



**ಧನುರ್ಮಾಸದ ಇಷ್ಟಲಿಂಗ ಮಹಾಪೂಜಾ-ಜನ ಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಸಂತರ ದಾರಿಯಲ್ಲಿ ನಡೆದರೆ ಬದುಕು ಸಾರ್ಥಕ

**■ವಿಜಯಸಾಕ್ಷಿ ಸುದ್ದಿ, ತುಮಕೂರು**

ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಶಿವಜ್ಞಾನದ ಅರಿವು ಮತ್ತು ಆಚರಣೆ ಮುಖ್ಯ. ಚಿಂತೆ ಚಿಂತನಗೊಂಡಾಗ ಬಾಳು ವಿಕಾಸಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ನಗರದ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್ ಆಶ್ರಯದಲ್ಲಿ ಜರುಗಿದ ಧನುರ್ಮಾಸದ ಇಷ್ಟಲಿಂಗ ಮಹಾಪೂಜಾ-ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಇರುವುದೆಲ್ಲವೂ ಅಮೂಲ್ಯ ಸಂಪತ್ತು. ಚಿನ್ನವಿಲ್ಲದೇ ಬದುಕಬಹುದು. ಆದರೆ ಅನ್ನವಿಲ್ಲದೇ ಬದುಕಲಾಗದು.



ಶ್ರದ್ಧಾವಂತರಾದ ಭಾರತೀಯರು ಮಣ್ಣು, ನೀರು, ಗಾಳಿ, ಬೆಂಕಿ, ಕಲ್ಲುಗಳಲ್ಲಿ ದೇವರನ್ನು ಕಂಡು ಪೂಜಿಸಿದವರು. ದೇವರ ಮೇಲಿನ ನಂಬಿಕೆ ಶಾಶ್ವತ ನಂದಾದೀಪ. ನಂಬಿಗೆ ವಿಶ್ವಾಸಗಳನ್ನು ಎಂದಿಗೂ ಕಳೆದುಕೊಳ್ಳಬಾರದು.

ಮನಸ್ಸೆಂಬ ಚಂಚಲ ಅಲೆಗಳ ಹೊಯ್ದಾಟವನ್ನು ಶಾಂತ ಪ್ರಶಾಂತಗೊಳಿಸುವ ಮಾರ್ಗವೇ ಆಧ್ಯಾತ್ಮವಾಗಿದೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ. ಮನುಷ್ಯನಿಗೆ ಏನೆಲ್ಲ ಸೌಲಭ್ಯಗಳಿದ್ದರೂ ಬದುಕು ಹರ್ಷದಾಯಕವಾಗಿಲ್ಲ.

ಜ್ಯೋತಿ ಉರಿದು ಬೆಳಕು ಕೊಡುವಂತೆ ಸಂತ ಮಹಾಂತರು ಬದುಕಿ ಬಾಳುವ ಜನ ಸಮುದಾಯಕ್ಕೆ ಆದರ್ಶ ವಿಚಾರ ಧಾರೆಗಳನ್ನು ಕೊಟ್ಟಿದ್ದಾರೆ. ಅವರು ತೋರಿದ ದಾರಿಯಲ್ಲಿ ನಡೆದರೆ ಸಾಕು, ಜೀವನ ಸಾರ್ಥಕಗೊಳ್ಳುತ್ತದೆ ಎಂದರು.

ದಿನದರ್ಶಿಕೆ ಬಿಡುಗಡೆಗೊಳಿಸಿದ ತುಮಕೂರು ನಗರ ಶಾಸಕ ಜಿ.ಬಿ. ಜ್ಯೋತಿ ಗಣೇಶ ಮಾತನಾಡಿ, ಸತ್ಕಾರ್ಯಗಳ ಮೂಲಕ ಮನುಷ್ಯ ಮುನ್ನಡೆದಾಗ ಎಲ್ಲೆಡೆ ಶಾಂತಿ-ಸಮಾಧಾನ ನೆಲೆಗೊಳ್ಳಲು ಸಾಧ್ಯ. ಸತ್ಯ ಶುದ್ಧ ಕಾಯಕದಿಂದ ಬದುಕಿಗೆ ನಿಜವಾದ ಬೆಲೆ ಬರುತ್ತದೆ. ಶ್ರೀ ರಂಭಾಪುರಿ ಜಗದ್ಗುರುಗಳ ಶ್ರಮ ಸಂಚಾರ ಮತ್ತು ಬೋಧಾಮೃತ ನಮ್ಮೆಲ್ಲರ ಉನ್ನತಿಗೆ ಪ್ರೇರಕ ಶಕ್ತಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

ಡಾ. ಎಸ್.ಪರಮೇಶ, ಟಿ.ಬಿ. ಹರೀಶ, ಎನ್.ಬಿ. ಪ್ರದೀಪಕುಮಾರ, ನಿಖಿಲ ರಾಜಣ್ಣ, ಸಿ.ಪಿ. ವಿಜಯ, ಎನ್.ಸಿ. ಸಚಿನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಕೆ.ಬಿ. ಜಯಣ್ಣ, ಕೆ.ಜಿ. ಜಗದೀಶ ಮತ್ತು ಶಂಕರ್ ಮೋಹನ್ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು. ಅಂಕನಹಳ್ಳಿ ಮಠದ ಶಿವರುದ್ರ ಶಿವಾಚಾರ್ಯರು, ಅಂಬಲದೇವರಹಳ್ಳಿ ಮಠದ ಉಜ್ಜನೀಶ್ವರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು.

ಬಾಳೆಹೊನ್ನೂರು ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು.

ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟಿನ ಅಧ್ಯಕ್ಷ ಟಿ.ಆರ್. ಸದಾಶಿವಯ್ಯ ಸ್ವಾಗತಿಸಿದರು. ಸಹಕಾರ್ಯದರ್ಶಿ ಜಿ.ಎಸ್. ಸಿದ್ಧರಾಜು ನಿರೂಪಣೆ ಮಾಡಿದರು.

ಸಮಾರಂಭ ಉದ್ಘಾಟಿಸಿದ ಗೃಹ ಸಚಿವ ಡಾ. ಜಿ.ಪರಮೇಶ್ವರ ಮಾತನಾಡಿ, ಸಂಘರ್ಷದಿಂದ ಕೂಡಿದ ಮನುಷ್ಯನ ಬಾಳಿಗೆ ನೆಮ್ಮದಿ, ಶಾಂತಿ ದೊರಕಲು ಆಧ್ಯಾತ್ಮ ಚಿಂತನಗಳು ಅವಶ್ಯಕ. ಭಾರತೀಯ ಉತ್ಕೃಷ್ಟ ಸಂಸ್ಕೃತಿಯನ್ನು ನಾಡಿನ ಮಠಗಳು ಬೆಳೆಸುತ್ತಾ ಬಂದಿವೆ. ಶ್ರೀ ರಂಭಾಪುರಿ ಪೀಠದ ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ ದೂರದೃಷ್ಟಿ ಮತ್ತು ವಿಶಾಲ ಚಿಂತನಗಳು ನಮ್ಮೆಲ್ಲರ ಬಾಳಿಗೆ ಬೆಳಕು ತೋರುತ್ತಿವೆ.

ಇಂದಿನ ಜಗದ್ಗುರುಗಳು ನಿರಂತರ ಶ್ರಮಿಸಿ ನಾಡು-ನುಡಿ-ಧರ್ಮ ಕಟ್ಟಿ ಬೆಳೆಸುವ ಕಾರ್ಯ ಮಾಡುತ್ತಿರುವುದು ಸಂತೋಷ ಉಂಟುಮಾಡುತ್ತದೆ ಎಂದರು.

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸಿ




**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಇಂದಿನ ಆಧುನಿಕ ಯುಗದಲ್ಲಿ ಪ್ರತಿಯೊಬ್ಬರೂ ಶಿಕ್ಷಣ ಹೊಂದುವುದು ಅವಶ್ಯಕ. ಈ ದಿಸೆಯಲ್ಲಿ ಪೋಷಕರು ಮಕ್ಕಳಿಗಾಗಿ ಆಸ್ತಿಯನ್ನು ಮಾಡದೇ, ಮಕ್ಕಳನ್ನೇ ಆಸ್ತಿಯನ್ನಾಗಿಸುವುದಕ್ಕೆ ಅವರಿಗೆ ಗುಣಮಟ್ಟದ ಶಿಕ್ಷಣ ಸಿಗುವ ಅವಕಾಶವನ್ನು ಕಲ್ಪಿಸಬೇಕೆಂದು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ಅವರು ಶಿರಹಟ್ಟಿಯ ಸೇಂಟ್ ಜೋಸೆಫ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ 2025-26ನೇ ಸಾಲಿನ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳ ದೈನಂದಿನ ಪ್ರಗತಿಯ ಬಗ್ಗೆ ನಿಗಾ ವಹಿಸಬೇಕು. ಅವರಿಗೆ ಮನೆಯಲ್ಲಿ ಶಿಕ್ಷಣಕ್ಕೆ ಪೂರಕವಾದ ವಾತಾವರಣವನ್ನು ನಿರ್ಮಿಸಬೇಕು.

ಅಂದಾಗ ಮಕ್ಕಳು ಗುಣಮಟ್ಟದ ಶಿಕ್ಷಣ ಹೊಂದಲು ಸಾಧ್ಯವಾಗುತ್ತದೆ. ಶಾಲೆಗಳಲ್ಲಿಯೂ ಸಹ ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ಕಲ್ಪಿಸಲು ಮುಂದಾಗಬೇಕೆಂದು ಹೇಳಿದರು.

ಶಾಲೆಯ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ಫಾದರ್ ಅಭಿನವ ಪಾಲ್, ಹುಬ್ಬಳ್ಳಿಯ ರಾಜು ಮಳಗೇರಿ, ಪಟ್ಟಣ ಪಂಚಾಯಿತಿ ಸದಸ್ಯರಾದ ಸಂದೀಪ ಕಪ್ಪತ್ತನವರ, ಹೊನ್ನಪ್ಪ ಶಿರಹಟ್ಟಿ, ಮಂಜುನಾಥ ಘಂಟಿ, ಅಜ್ಜು ಪಾಟೀಲ, ಮಾಬುಸಾಬ ಲಕ್ಷ್ಮೇಶ್ವರ, ಆನಂದ ಕೋಳಿ, ಮುತ್ತು ಮಜ್ಜಗಿ, ಅಕ್ಬರಸಾಬ ಯಾದಗಿರಿ, ಎಚ್.ಆರ್. ಬೆನಹಾಳ, ದೇವಪ್ಪ ಬಟ್ಟೂರ, ರಾಜಗೋಪಾಲ ಕಡ್ಲಿಕೊಪ್ಪ, ಸಂಸ್ಥೆಯ ಮುಖ್ಯಸ್ಥ ಎಸ್. ಎಸ್. ಸಾಮ್ರಾಟ್ ಮತ್ತು ಶಿಕ್ಷಕರು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮಾರಕ ಪೋಲಿಯೋವನ್ನು ತಡೆಗಟ್ಟಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ದೇಶವನ್ನು ಪೋಲಿಯೋ ಮುಕ್ತವನ್ನಾಗಿಸಲು 1994ರಲ್ಲಿ ಪ್ರಾರಂಭವಾದ ಪಲ್ಸ್ ಪೋಲಿಯೋ ಯೋಜನೆಯಿಂದಾಗಿ ದೇಶದಲ್ಲಿ ಸಾಕಷ್ಟು ಪ್ರಗತಿ ಕಂಡು ಬಂದಿದೆ. ಅಂಗವಿಕಲತೆಯೊಂದಿಗೆ ಭೀಕರ ಪರಿಣಾಮಗಳನ್ನು ಬೀರಬಹುದಾದ ಈ ಮಾರಕ ರೋಗವನ್ನು ತಡೆಗಟ್ಟಲು ಪೋಲಿಯೋ ಲಸಿಕೆಯನ್ನು ಮಕ್ಕಳಿಗೆ ಕಡ್ಡಾಯವಾಗಿ ಹಾಕಿಸಬೇಕು ಎಂದು ತಹಸೀಲ್ದಾರ ಕೆ.ರಾಘವೇಂದ್ರ ರಾವ್ ಹೇಳಿದರು.

ಅವರು ರವಿವಾರ ಶಿರಹಟ್ಟಿಯ ತಾಲೂಕಾ ಆಸ್ಪತ್ರೆಯಲ್ಲಿ ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಪೋಲಿಯೋ ದಿನದ ಅಂಗವಾಗಿ ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ಪೋಷಕರು ತಮ್ಮ 5 ವರ್ಷದೊಳಗಿನ ಮಕ್ಕಳನ್ನು ಹತ್ತಿರದ ಲಸಿಕಾ ಕೇಂದ್ರಕ್ಕೆ ಕರೆದೊಯ್ದು ಲಸಿಕೆ



ಹಾಕಿಸಿಕೊಳ್ಳಬೇಕು. ಅಭಿಯಾನವನ್ನು ಯಶಸ್ವಿಗೊಳಿಸಲು ಸಾಕಷ್ಟು ಸಿದ್ಧತೆಗಳನ್ನು ಮಾಡಲಾಗಿದ್ದು, ಮಕ್ಕಳನ್ನು ಪೋಲಿಯೋದಿಂದ ರಕ್ಷಿಸುವುದಕ್ಕಾಗಿ ನಿರ್ಮಿಸಲಾದ ಬೂತ್‌ಗಳಿಗೆ ತೆರಳಿ ಮಕ್ಕಳಿಗೆ ಲಸಿಕೆ ಹಾಕಿಸಬೇಕು ಎಂದರು.

ಈ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ. ಸುಭಾಸ ದೈಗೊಂಡ, ಡಾ. ಪವನ ಫಾಯದೆ, ಹುರುಳಿಕುಪ್ಪಿ ಮುಂತಾದವರು ಉಪಸ್ಥಿತರಿದ್ದರು.

# ಚಿತ್ರಕಲಾ ಶಿಕ್ಷಕರು ಇಲಾಖೆಯ ಆಸ್ತಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಶಾಲೆಯಲ್ಲಿ ಮಕ್ಕಳ ಕಲಿಕೆ ಮತ್ತು ಶಾಲಾ ವಾತಾವರಣವನ್ನು ನಿರ್ಮಿಸುವಲ್ಲಿ ಚಿತ್ರಕಲಾ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ.

ಚಿತ್ರಕಲಾ ಶಿಕ್ಷಕರು ಇಲಾಖೆಯ ಆಸ್ತಿ ಎಂದು ಶಾಲಾ ಶಿಕ್ಷಣ ಇಲಾಖೆ (ಆಡಳಿತ)ಯ ಉಪನಿರ್ದೇಶಕ ಆರ್ .ಎಸ್. ಬುರಡಿ ಅಭಿಪ್ರಾಯಪಟ್ಟರು.

2025-26ನೇ ಸಾಲಿನ ಜಿಲ್ಲಾಮಟ್ಟದ ಸಹಪಠ್ಯ ಚಟುವಟಿಕೆಯ ಸ್ಪರ್ಧೆಯ ಬಹುಮಾನವನ್ನು ವಿತರಿಸಿ ಮಾತನಾಡಿದ ಅವರು, ಚಿತ್ರಕಲೆಯಿಂದ ಸೃಜನಶೀಲತೆ, ಕ್ರಿಯಾಶೀಲತೆಯನ್ನು ಹೆಚ್ಚಿಸಿಕೊಳ್ಳಬಹುದು. ಚಿತ್ರಕಲೆ ಐತಿಹಾಸಿಕ ಮಹತ್ವ ಮತ್ತು ದಾಖಲೆಯನ್ನು ಸಾರುತ್ತದೆ. ಕಲಾವಿದ ಮಾನವ ಕುಲದ ಶಾಸನಕಾರ ಎಂದರು.

ಚಿತ್ರಕಲಾ ಶಿಕ್ಷಕರ ಸಂಘದ ಸಂಘದ ಜಿಲ್ಲಾಧ್ಯಕ್ಷ ವಿಜಯ ಕಿರೇಸೂರ ಮಾತನಾಡಿ, ಇಲಾಖೆಯ ಸಹಪಠ್ಯ ಚಟುವಟಿಕೆಯ ಕಾರ್ಯಕ್ರಮಗಳು ಶಿಕ್ಷಕರ ಆತ್ಮವಿಶ್ವಾಸ ಹೆಚ್ಚಿಸಿ ಅವರ ಆಂತರ್ಯದಲ್ಲಿನ ಕಲೆಯನ್ನು ಹೊರತರುವಲ್ಲಿ ಸಹಕಾರಿಯಾಗಿದೆ. ಶಿಕ್ಷಣದ ಗುಣಮಟ್ಟವನ್ನು ಹೆಚ್ಚು ಸುಧಾರಿಸಲು ಸಾಧ್ಯವಾಗಿಸುತ್ತದೆ ಎಂದರು.

ವೃತ್ತಿ ಶಿಕ್ಷಣ ವಿಷಯ ವೀಕ್ಷಕರಾದ ಗೀತಾ ಕುಲಕರ್ಣಿ ಮಾತನಾಡಿ, ಸಹ ಪಠ್ಯ ಚಟುವಟಿಕೆ, ಸ್ಪರ್ಧೆಯಿಂದ ಶಿಕ್ಷಕರಲ್ಲಿ ಹೊಸದೊಂದು ಅನುಭವ ಹಾಗೂ ವಿಶೇಷತೆಯನ್ನು ಅಳವಡಿಸಿಕೊಳ್ಳುವಲ್ಲಿ ಸಹಾಯಕವಾಗಿದೆ ಎಂದರು.

ಚಿತ್ರಕಲೆ ಸ್ಪರ್ಧೆಯಲ್ಲಿ ಕಾಳಪ್ಪ ಬಡಿಗೇರ ಪ್ರಥಮ, ಪ್ರವೀಣ ಮನೋಹರ್ ಗಾಯಕರ ದ್ವಿತೀಯ, ನಾಗರಾಜ ಚಿತ್ರಗಾರ ಮತ್ತು ಜೆ.ಕೆ. ಭಾಗವಾನರ್ ತೃತೀಯ ಸ್ಥಾನ, ಟಿ.ಆರ್. ಬೇವಿನಮರದ ಮತ್ತು ಮಲ್ಲಿಕಾರ್ಜುನ ಮುಂಡರಗಿ ಸಮಾಧಾನಕರ ಬಹುಮಾನ ಪಡೆದರು.

ಬಿ.ಎಲ್. ಚವ್ಹಾಣ, ಬಸವರಾಜ ನೆಲಜೇರಿ, ಬಸವರಾಜ ಕುತ್ನಿ ಸ್ಪರ್ಧೆಯ ನಿರ್ಣಾಯಕರಾಗಿ ಆಗಮಿಸಿದ್ದರು. ಶರಣಯ್ಯ ವಸ್ತ್ರದ ನಿರೂಪಿಸಿ ವಂದಿಸಿದರು.

# ಬಿಹಾರ ಸಿಎಂ ನಿತೀಶ್‌ಕುಮಾರ್ ಕ್ಷಮೆ ಕೇಳಲಿ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಪಾಟ್ನಾದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮುಸ್ಲಿಂ ಮಹಿಳಾ ವೈದ್ಯೆಯೊಬ್ಬರ ಹಿಜಾಬ್‌ಅನ್ನು ಬಿಹಾರ ಮುಖ್ಯಮಂತ್ರಿ ನಿತೀಶ್‌ಕುಮಾರ್ ಎಳೆದಿದ್ದು ಅತ್ಯಂತ ಖಂಡನೀಯ. ಈ ಕೃತ್ಯವು ಮಹಿಳೆಯರಿಗೆ ಮಾಡಿದ ಅವಮಾನವಾಗಿದ್ದು, ಸಿಎಂ ಬೇಷರತ್ತಾಗಿ ಕ್ಷಮೆ ಯಾಚಿಸಬೇಕೆಂದು ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಕಾರ್ಯದರ್ಶಿ, ವಕೀಲರಾದ ದಾವಲಸಾಬ ತಾಳಿಕೋಟಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟನೆ ನೀಡಿರುವ ಅವರು, ಮುಸ್ಲಿಂ ಮಹಿಳೆಯರಿಗೆ ಹಿಜಾಬ್ ನಂಬಿಕೆ, ಘನತೆ ಮತ್ತು ಸ್ವಾಭಿಮಾನವನ್ನು ಪ್ರತಿನಿಧಿಸುತ್ತದೆ. ಸಾರ್ವಜನಿಕವಾಗಿ ಮಹಿಳೆಯ ಮುಸುಕನ್ನು ತೆಗೆದುಹಾಕುವುದು, ಧಾರ್ಮಿಕ ಉಡುಪನ್ನು ಅವಮಾನಿಸುವುದು ಅವರ ನೈಜ ಮನಸ್ಥಿತಿಯನ್ನು



ಬಹಿರಂಗಪಡಿಸುತ್ತದೆ.

ಈ ದೇಶದ ಸಂಸ್ಕೃತಿ ಮಹಿಳೆಯರನ್ನು ಅತ್ಯಂತ ಗೌರವದಿಂದ ಕಾಣುವುದಾಗಿದೆ. ಆದರೆ, ಮುಖ್ಯಮಂತ್ರಿ ನಿತೀಶ್ ಕುಮಾರ ತಮ್ಮ ಸಾಂವಿಧಾನಿಕ ಹುದ್ದೆಯ ಘನತೆಯನ್ನು ಎತ್ತಿಹಿಡಿಯುವಲ್ಲಿ ವಿಫಲರಾಗಿದ್ದು, ಕೂಡಲೇ ಸಾರ್ವಜನಿಕವಾಗಿ ಕ್ಷಮೆ ಯಾಚಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಗಣಿತ ಕಬ್ಬಿಣದ ಕಡಲೆಯಲ್ಲ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಲ್ಲಿನ ಸ್ಕೂಲ್ ಚಂದನದಲ್ಲಿ ಸೋಮವಾರ ಭಾರತದ ಶ್ರೇಷ್ಠ ಗಣಿತಶಾಸ್ತ್ರಜ್ಞ ಶ್ರೀನಿವಾಸ ರಾಮಾನುಜನ್ ಅವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಗಣಿತ ದಿನವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯೋಪಾಧ್ಯಾಯ ಆರ್.ಜಿ. ಭಾವನವರ, ಗಣಿತ ಸಿದ್ಧಾಂತಗಳು, ವಿಶ್ಲೇಷಗಳನ್ನು ಅರಿಯುವದು ಸುಲಭ. ಅದರ ಜೊತೆಗೆ ದೈನಂದಿನ ಜೀವನಕ್ಕೆ ಗಣಿತದ ಮೂಲ ಕ್ರಿಯೆಗಳು ಆಧಾರವಾಗಿದೆ. ಗಣಿತದ ಆಳ-ಅಗಲಗಳನ್ನು ಅಳೆದು ತೂಗುವುದಕ್ಕೆ ಗಣಿತ ಶಾಸ್ತ್ರಜ್ಞರಿಂದ ಮಾತ್ರ ಸಾಧ್ಯ. ಗಣಿತ ಶಾಸ್ತ್ರಕ್ಕೆ ಭಾರತೀಯರ ಕೊಡುಗೆ ಅಪಾರವಾಗಿದ್ದು, ಸೊನ್ನೆಯನ್ನು ಕಂಡುಹಿಡಿದ ಭಾರತೀಯರಿಂದಾಗಿ ಸಂಖ್ಯಾಶಾಸ್ತ್ರ ಇಷ್ಟು ವಿಸ್ತಾರವಾಗಿ ಬೆಳೆಯಲು ಮತ್ತು ಅದರ ಆಳಕ್ಕೆ ಇಳಿಯಲು ಸಾಧ್ಯವಾಗುತ್ತಿದೆ.

ಗಣಿತ ಕಬ್ಬಿಣದ ಕಡಲೆಯಲ್ಲ, ಹೆಚ್ಚು ಸುಲಭವಾದ ವಿಷಯವಾಗಿದ್ದು, ಮಕ್ಕಳು ಆಸಕ್ತಿಯಿಂದ ಕಲಿಯಬಹುದಾಗಿದೆ ಎಂದು ಹೇಳಿದರು.


ಗಣಿತ ಶಿಕ್ಷಕಿಯರಾದ ಸಿಮರಿನ್ ಹಾಗೂ ಹೊನ್ನಮ್ಮ ಅವರು ಗಣಿತ ವಿಷಯವನ್ನು ಮನದಟ್ಟು ಮಾಡುವುದರೊಂದಿಗೆ ರಾಷ್ಟ್ರೀಯ ಗಣಿತ ದಿನದ ಮಹತ್ವ ಮತ್ತು ಆಚರಣೆಯ ವಿಶೇಷತೆಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಶಿಕ್ಷಕವೃಂದ, ವಿದ್ಯಾರ್ಥಿಗಳು ಹಾಜರಿದ್ದರು.

# ಆತ್ಮ ನಿರ್ಭರ ಭಾರತ ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ನಗರದ ದಂಡಿನರವರ ಕಾನೂನು ಮಹಾವಿದ್ಯಾಲಯದಲ್ಲಿ ಆತ್ಮ ನಿರ್ಭರ ಭಾರತ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ರಾಜ್ಯ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಡಾ. ಶೋಭಾ ನಿಸಿಂಗೌಡರ್, ರಾಜು ಕುರಡಗಿ, ರವಿ ದಂಡಿನ, ವಿಜಯಲಕ್ಷ್ಮೀ ಮಾನ್ವಿ, ನಿರ್ಮಲಾ ಕೊಳ್ಳಿ, ಕವಿತಾ ಬಂಗಾರಿ, ಸ್ವಾತಿ ಅಕ್ಕಿ, ಪದ್ಮಿನಿ ಮುತ್ತಲದಿನ್ನಿ, ವಂದನಾ ವರ್ನೆಕರ್, ಅಶ್ವಿನಿ ಜಗತಾಪ್, ಶಾರದಾ ಸಜ್ಜನ್, ಶ್ವೇತಾ ದಂಡಿನ, ಅಕ್ಕಮ್ಮ ವಸ್ತ್ರದ, ಸುಮಂಗಲ ಕೊನೆಹೂಲ, ಶಿವಲೀಲಾ ಉಮಚಗಿ, ಕಮಲಾಕ್ಷಿ ತೆಕ್ಕಲ್ಕೋಟೆ, ಕಸ್ತೂರಿ ಕಮ್ಮಾರ್, ಪ್ರೀತಿ ಶಿವಪ್ಪನಮಠ, ರೇಖಾ ಗವಳಿ, ನಾಗರಾಜ್ ಕುಲಕರ್ಣಿ, ರಮೇಶ್ ಸಜ್ಜಗಾರ್, ಮಂಜುನಾಥ್ ಶಾಂತಗಿರಿ ಮುಂತಾದವರು ಉಪಸ್ಥಿತರಿದ್ದರು.



ಕಾನೂನು ಸಚಿವ ಎಚ್. ಕೆ.ಪಾಟೀಲ ಅವರು ಸೋಮವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರೊಂದಿಗೆ ಚರ್ಚಿಸಿದರು.


**ಪುರಸಭೆ ಕಾರ್ಯಾಲಯ, ಗಜೇಂದ್ರಗಡ-582114**

ತಾ॥ ಗಜೇಂದ್ರಗಡ ಜಿ: ಗದಗ ದೂರವಾಣಿ ಸಂಖ್ಯೆ : 08381-262222
ಫ್ಯಾಕ್ಸ್ : 08381-263552 E-mail address : tmc.gjd@gmail.com

ಕ್ರಸಂ:ಪುಸಗ/ಕೋ/ವಹಿ/ /2025-26 ದಿನಾಂಕ: 22-12-2025

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆಯ ಅಧಿನಿಯಮ **1999** ಮತ್ತು (ತಿದ್ದುಪಡಿ) **2001** ರಂತೆ KPP-ಪೋರ್ಟಲ್‌ನಲ್ಲಿ ನೊಂದಣಿ ಮಾಡಿಸಿದ ಅರ್ಹ ಗುತ್ತಿಗೆದಾರರಿಂದ ಪುರಸಭೆಯ ಸಾಮಾನ್ಯ ನಿಧಿ ಅನುದಾನದಡಿಯಲ್ಲಿ ಬೀದಿ ನಾಯಿಗಳ ಸಂತಾನ ಹರಣ ಚಿಕಿತ್ಸೆ ಮಾಡುವ ಕುರಿತು ಇಂಡೆಂಟ್ ನಂ : **DMA/2025-26/SE6841/CALL-2** KPP-ಪೋರ್ಟಲ್ **(KPP-Portal)** ಮುಖಾಂತರ ಟೆಂಡರ್ ಅಹ್ವಾನಿಸಲಾಗಿದೆ. ಸಂಪೂರ್ಣ ವಿವರಗಳಿಗಾಗಿ ಅಂತರ್ಜಾಲ ವಿಳಾಸ: **https://kppp.karnataka.gov.in/** ದಲ್ಲಿ ತಿಳಿದುಕೊಳ್ಳಬಹುದಾಗಿದೆ.

1 ಟೆಂಡರ್ ಸಲ್ಲಿಸಲು ಕೊನೆಯ **ದಿನಾಂಕ : 31-12-2025 ರಂದು ಸಾಯಂಕಾಲ 5.00.**
2 ಬಿಡ್ ತೆರೆಯುವ **ದಿನಾಂಕ : 02-01-2026 ರಂದು ಮುಂಜಾನೆ 11.00.**

ಸಹಿ/- ಮುಖ್ಯಾಧಿಕಾರಿ ಪುರಸಭೆ, ಗಜೇಂದ್ರಗಡ

ಸಹಿ/- ಆಡಳಿತಾಧಿಕಾರಿಗಳು ಪುರಸಭೆ, ಗಜೇಂದ್ರಗಡ

ವಾ.ಸಾ.ಇ/ಗದಗ/470/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka